ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೨

ಪಟ್ಟಿ – ೧೪

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : ೨೦ನೇ ಮಾರ್ಚ್, ೨೦೨೦

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಪ್ರವಾಸೋದ್ಯಮ, ಕನ್ನಡ ಮತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

೪. ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

೫. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೬. ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

---

## ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಪೌಷ್ಠಿಕ ಆಹಾರದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೯ (೧೫೭೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸುಮಾರು ೪೦ ಸಾವಿರಕ್ಕೂ ಅಧಿಕ ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಂಗನವಾಡಿ ಕೇಂದ್ರಗಳಿಗೆ ಮಹಿಳಾ ಆಹಾರ ತಯಾರಿಕಾ ಘಟಕ (MSPC) ದಿಂದ ಕಳಪೆ ಮಟ್ಟದ ಆಹಾರ ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ MSPC ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಈ MSPC ಗಳು ಸ್ವ–ಸಹಾಯ ಗುಂಪಿನ ಹೆಸರಿನಲ್ಲಿ ಉದ್ಯೋಗಸ್ಥರು ಕಳಪೆ ಮಟ್ಟದ ಆಹಾರ ಪೂರೈಕೆ ಮಾಡುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅದರ ವಿರುದ್ದ ಯಾವ ಕ್ರಮ ಕೈಗೊಳ್ಳಲಾಗಿದೆ ; ಬರದೆ ಇದ್ದಲ್ಲಿ ಇದಕ್ಕೆ ಹೊಣೆಗಾರರು ಯಾರು ?



## ಕಮಲನಗರ ತಾಲ್ಲೂಕಿನಲ್ಲಿ ಕ್ರೀಡಾಂಗಣ ಆರಂಭಿಸುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩೦ (೧೫೮೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ಆರಂಭವಾದ ಕಮಲನಗರ ತಾಲ್ಲೂಕಿಗೆ ಹೊಸ ತಾಲ್ಲೂಕು ಕ್ರೀಡಾಂಗಣ ಪ್ರಾರಂಭಿಸುವ ಬಗ್ಗೆ ಸರ್ಕಾರದ ಚಿಂತನೆ ಇದೆಯೇ ; ಇದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ?

## ಬೀದರ್ ಜಿಲ್ಲೆಯ ವಕ್ಫ್ ಆಸ್ತಿಯ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩೧ (೧೫೮೧) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ವಕ್ಫ್‌ಗೆ ಸೇರಿದ ಒಟ್ಟು ಜಮೀನು ಎಷ್ಟು; ಅದರಲ್ಲಿ ಅತಿಕ್ರಮಣ ಆಗಿರುವ ಜಮೀನು ಎಷ್ಟು ;

(ಆ) ಸದ್ಯದಲ್ಲಿ ಇರುವ ಜಮೀನಿಗೆ ಸುತ್ತು ಗೋಡೆ ನಿರ್ಮಿಸಲಾಗಿದೆಯೇ; ನಿರ್ಮಿಸದಿದ್ದರೆ ಕಾರಣವೇನು ;

(ಇ) ಅತಿಕ್ರಮಣವಾಗಿದ್ದರೆ ಅಂತಹವರ ವಿರುದ್ದ ತೆಗೆದುಕೊಂಡ ಕ್ರಮವೇನು ?

## ಬೀದರ್ ಜಿಲ್ಲೆಯ ಕ್ರಿಶ್ಚಿಯನ್ ಮತ್ತು ಮುಸ್ಲಿಮರ ಸೌಲಭ್ಯದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೩೨ (೧೫೮೨) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಅಧಿಕ ಸಂಖ್ಯೆಯಲ್ಲಿ ಕ್ರಿಶ್ಚಿಯನ್ನರು ಮತ್ತು ಮುಸ್ಲಿಮರಿದ್ದು, ಇದರಲ್ಲಿ ಕ್ರಿಶ್ಚಿಯನ್ ಸಮುದಾಯಕ್ಕೆ ಸರಿಯಾದ ಸೌಲಭ್ಯ ಸಿಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಜಲಧಾರೆ ಯೋಜನೆ ಗುರಿ ಮತ್ತು ಉದ್ದೇಶಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೩ (೧೬೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಲಧಾರೆ ಯೋಜನೆಯು ಕಾರ್ಯರೂಪಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಿದೆ. (ವಿವರ ನೀಡುವುದು)

(ಆ) ಈ ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ನಿಗಧಿಪಡಿಸಿದ ಅನುದಾನವೆಷ್ಟು ; ಅದರಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಂಡಿದೆ ; (ಜಿಲ್ಲಾವಾರು, ಪ್ರತ್ಯೇಕವಾಗಿ ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಲಧಾರೆ ಯೋಜನೆ ಗುರಿ ಮತ್ತು ಉದ್ದೇಶಗಳೇನು ; (ವಿವರ ನೀಡುವುದು)



(ಈ) ಮಂಡ್ಯ ಜಿಲ್ಲೆಯಲ್ಲಿ ಜಲಧಾರೆ ಯೋಜನೆಯ ಅನುಷ್ಠಾನದಿಂದ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲಾಗುವುದು ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೪ (೧೬೪೫) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಮಂಜೂರಾದ ಅನುದಾನವೆಷ್ಟು; ಆ ಪೈಕಿ ಬಿಡುಗಡೆಯಾದ ಅನುದಾನವೆಷ್ಟು ; (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮಂಡ್ಯ ಜಿಲ್ಲೆಗೆ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಅನುದಾನವೆಷ್ಟು ; (ಆದೇಶದ ಪ್ರತಿಯೊಂದಿಗೆ ವಾರ್ಷಿಕವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ಮತ್ತು ಪೂರ್ಣವಾಗದೇ ಇರುವ ಕಾಮಗಾರಿಗಳು ಯಾವುವು ; ಪೂರ್ಣವಾಗದೆ ಇರಲು ಕಾರಣಗಳೇನು ? (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

## ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಿಂದ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩೫ (೧೬೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳ ಅವಧಿಯಲ್ಲಿ ಪಂಚಾಯತ್ ರಾಜ್ ಇಲಾಖೆಯಿಂದ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಯಡಿಯಲ್ಲಿ ಸರ್ಕಾರದಿಂದ ಮಂಜೂರಾದ ಕಾಮಗಾರಿಗಳಾವುವು ; (ಪೂರ್ಣ ವಿವರ ನೀಡುವುದು)

(ಆ) ವಿವಿಧ ಯೋಜನೆಯಡಿಯಲ್ಲಿ ತೆಗೆದುಕೊಂಡ ಭೌತಿಕ ಹಾಗೂ ಆರ್ಥಿಕ ಗುರಿಯೆಷ್ಟು ; (ವಿವರ ಒದಗಿಸುವುದು)

(ಇ) ಇಲ್ಲಿಯವರೆಗೆ ವಿವಿಧ ಶೀರ್ಷಿಕೆಯಡಿಯಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಎಷ್ಟು ಖರ್ಚಾಗಿದೆ ; ಗುತ್ತಿಗೆದಾರರಿಗೆ ನೀಡಬೇಕಾದ ಬಾಕಿ ಹಣವೆಷ್ಟು ; (ಮಾಹಿತಿ ನೀಡುವುದು)

(ಈ) ೨೦೨೦ರ ಮಾರ್ಚ್ ತಿಂಗಳೊಳಗಾಗಿ ಮುಗಿಯುವ ಕಾಮಗಾರಿಗಳಿಗೆ ಬಾಕಿಯಿರುವ ಹಣ ಪಾವತಿ ಮಾಡಲು ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆಯೇ ?

## ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೩೬ (೧೫೫೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ವಿದ್ಯಾರ್ಥಿ ಪಾಸುಗಳು, ಅಂಗವಿಕಲರ, ಅಂಧರ, ಸ್ವಾತಂತ್ರ್ಯ ಹೋರಾಟಗಾರರ, ಹುತಾತ್ಮ ಯೋಧರ, ಗೋವಾ ವಿಮೋಚನಾ ಚಳುವಳಿಗಾರರ, ಎಂಡೋಸಲ್ಫಾನ್ ಪೀಡಿತರ, ಹಿರಿಯ ನಾಗರಿಕರಿಗೆ ರಿಯಾಯಿತಿ ದರದಲ್ಲಿ ಪಾಸುಗಳನ್ನು ವಿತರಿಸಿದ್ದಕ್ಕೆ ಸರ್ಕಾರದಿಂದ ಎಷ್ಟು ಹಣ ಸಂಸ್ಥೆಗೆ ಬಾಕಿ ಬರಬೇಕಾಗಿದೆ ;

(ಆ) ಈ ಬಾಕಿ ಹಣವನ್ನು ಇಲ್ಲಿಯವರೆಗೂ ಸರ್ಕಾರ ಸಂಸ್ಥೆಗೆ ನೀಡದೇ ಬಾಕಿ ಉಳಿಸಿಕೊಂಡಿರುವುದಕ್ಕೆ ಕಾರಣವೇನು ; ಈ ರೀತಿ ಬಾಕಿ ಹಣವನ್ನು ಕೊಡದೇ ಇರುವುದರಿಂದ ವಾ.ಕ.ರ.ಸಾ.ಸ ನಡೆಸಲು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕೂಡಲೇ ಸರ್ಕಾರ ವಾ.ಕ.ರ.ಸಾ.ಸ ಬಾಕಿ ನೀಡಬೇಕಾದ ಹಣವನ್ನು ನೀಡಿ ಸಂಸ್ಥೆಯನ್ನು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಕ್ರಮ ಕೈಗೊಳ್ಳುವುದೇ ;

(ಈ) ಬಿ.ಎಂ.ಟಿ.ಸಿ.ಯವರಿಗೆ ಮೋಟಾರ್ ವಾಹನ ತೆರಿಗೆ ವಿನಾಯಿತಿ ನೀಡಿದ್ದು ನಿಜವೇ ; ನಿಜವಿದ್ದಲ್ಲಿ, ಯಾವ ದಿನಾಂಕದಿಂದ ನೀಡಲಾಗಿದೆ ;

(ಉ) ಸದರಿ ವ್ಯವಸ್ಥೆಯನ್ನು ವಾ.ಕ.ರ.ಸಾ. ಸಂಸ್ಥೆಗೆ ವಿಸ್ತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ವಿಜಯಪುರ ಜಿಲ್ಲೆಯಲ್ಲಿ ಖಿಲಾರಿ ತಳಿಯ ಹಸುಗಳ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೩೭ (೧೬೧೧) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಖಿಲಾರಿ ತಳಿಯಾ ದೇಶಿ ತಳಿಯು ಇಂದಿನ ದಿನಮಾನಗಳಲ್ಲಿ ನಶಿಸಿ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ತಳಿಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ವಿಜಯಪುರ, ಬಾಗಲಕೋಟೆ ಮತ್ತು ಮಹಾರಾಷ್ಟ್ರದ ಸಾಂಗಲಿ ಮತ್ತು ಸೊಲ್ಲಾಪುರ ಜಿಲ್ಲೆಗಳಲ್ಲಿ ಆದಿಕಾಲದಿಂದಲೂ ಬದುಕಿ ಬಂದ ಈ ತಳಿಗಳ ಹಸುವಿನ ಪುನರುಜ್ಜೀವನ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಸದರಿ ತಳಿಯ ಹೋರಿಗಳು ಮತ್ತು ಹಸುಗಳಿಂದ ಯಾವ ಯಾವ ರೀತಿಯಲ್ಲಿ ರೈತರಿಗೆ ಮತ್ತು ಸಾಮಾನ್ಯ ಜನರಿಗೆ ಅನುಕೂಲವಾಗುತ್ತದೆ ಎಂಬುದು ಸರ್ಕಾರದ ಗಮನದಲ್ಲಿದೆಯೇ;

(ಈ) ಸರ್ಕಾರ ಅಮೃತ ಮಹಲ್ ಕಾಲದಲ್ಲಿ ದೇವಣಿ ತಳಿಗೆ ಬೀದರ್‌ನಲ್ಲಿ ಹಾಗೂ ಮುಧೋಳ್ ನಾಯಿಗಳಿಗೆ ಮುಧೋಳದಲ್ಲಿ ಸಂಶೋಧನಾ ಕೇಂದ್ರಗಳನ್ನು ಪ್ರಾರಂಭಿಸಿದ ರೀತಿಯಲ್ಲಿ ವಿಜಯಪುರದಲ್ಲಿ ಖಿಲಾರಿ ತಳಿಯ ಹಸುಗಳಿಗಾಗಿ ಒಂದು ಸಂಶೋಧನಾ ಹಾಗೂ ಅಭಿವೃದ್ಧಿ ಕೇಂದ್ರ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;



(ಉ) ಸದರಿ ಯೋಜನೆಗೆ ಬೇಕಾದ ಹುಲ್ಲುಗಾವಲಿನ ಪ್ರದೇಶ ಮತ್ತು ಇತರೆ ಸೌಲಭ್ಯಗಳು ಸಾಕಷ್ಟು ಇರುವುದರಿಂದ ಕೂಡಲೇ ಈ ಯೋಜನೆಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲು ಮುಂದಾಗುವುದೇ ?

## ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೩೩೮ (೧೬೧೨) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ್ ಇಲ್ಲಿನ ಕುಲಪತಿಗಳು ಹಾಗೂ ಇತರೆ ಅಧಿಕಾರಿಗಳು ಕೋಟ್ಯಾಂತರ ರೂಪಾಯಿಗಳ ದುರುಪಯೋಗ ಮಾಡಿರುವ ಹಗರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಶ್ವವಿದ್ಯಾಲಯಕ್ಕೆ ಕೇಂದ್ರ ಸರ್ಕಾರದಿಂದ ೬ನೇ ಯು.ಜಿ.ಸಿ. ಬಾಕಿ ವೇತನವನ್ನು ಬಿಡುಗಡೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ದಿನಾಂಕ ಹಾಗೂ ಆದೇಶದ ಪ್ರತಿ ನೀಡುವುದು ;

(ಇ) ವಿಶ್ವವಿದ್ಯಾಲಯದ ನಿವೃತ್ತಿಯಾಗಿರುವ ಬೋಧಕ ಸಿಬ್ಬಂದಿಯೊಬ್ಬರಿಗೆ ದಿನಾಂಕ: ೩೧.೦೭.೨೦೧೯ ರಂದು ೧೭.೫೦ ಲಕ್ಷ ರೂಗಳನ್ನು ಯು.ಜಿ.ಸಿ. ಬಾಕಿ ವೇತನ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಬೇರೆ ಸಿಬ್ಬಂದಿಯವರಿಗೆ ನೀಡದ ಈ ಸೌಲಭ್ಯವನ್ನು ಇವರೊಬ್ಬರಿಗೆ ನೀಡಿರುವುದಕ್ಕೆ ಕಾರಣಗಳೇನು ? (ವಿವರವಾದ ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರದ ಯೋಜನೆಗಳಿಗೆ ಬಂದಿರುವ ಅನುದಾನದ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೩೯ (೧೫೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಯಾವ ಯೋಜನೆಗಳಿಗೆ ಎಷ್ಟು ಅನುದಾನ ನೀಡಲಾಗಿದೆ ; (ಯೋಜನೆವಾರು ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಯಾವ ಯೋಜನೆಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಇದಕ್ಕಾಗಿ ಎಷ್ಟು ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಈ) ಉಳಿದ ಕಾಮಗಾರಿಗಳು ಯಾವುವು ಹಾಗೂ ಎಷ್ಟು ಸಮಯದಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಅಲ್ಪ ಸಂಖ್ಯಾತರ ಅಭಿವೃದ್ಧಿಗಾಗಿ ಇರುವ ಯೋಜನೆಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೪೦ (೧೫೯೮) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಯಾವ ಯೋಜನೆಗಳನ್ನು ಅನುಷ್ಠಾನ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಬಿಡುಗಡೆಯಾದ ಅನುದಾನ ಹಾಗೂ ಬಾಕಿ ಉಳಿದ ಅನುದಾನ ಎಷ್ಟು ; ಬಾಕಿ ಉಳಿದಿದ್ದಲ್ಲಿ, ಯಾವ ಕಾರಣಕ್ಕಾಗಿ ಬಾಕಿ ಉಳಿದಿದೆ;

(ಇ) ಕಾಲೋನಿಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಸರ್ಕಾರವು ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ;

(ಈ) ರಾಜ್ಯದ ವಿವಿಧ ಭಾಗಗಳಲ್ಲಿ ಅನುದಾನ ನೀಡಿಕೆಯಲ್ಲಿ ತಾರತಮ್ಯವಾಗಿದೆಯೇ ; ಹಾಗಿದ್ದಲ್ಲಿ, ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಜ್ ಭವನಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೪೧ (೧೫೯೯) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಅಲ್ಪಸಂಖ್ಯಾತರಿಗೋಸ್ಕರ ಎಷ್ಟು ಹಜ್ ಭವನಗಳನ್ನು ಮಂಜೂರು ಮಾಡಲಾಗಿದೆ ;

(ಆ) ಪೂರ್ಣಗೊಂಡಿರುವ ಹಜ್ ಭವನಗಳ ಕಾಮಗಾರಿಗಳು ಯಾವುವು; (ವಿವರ ನೀಡುವುದು) ಕಾಮಗಾರಿ ಪೂರ್ಣಗೊಳ್ಳದೆ ಇರುವ ಹಜ್ ಭವನಗಳು ಯಾವುವು; ವಿಳಂಬಕ್ಕೆ ಕಾರಣ ನೀಡುವುದು;

(ಇ) ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ರಾಜ್ಯದಲ್ಲಿರುವ ಕಲಾವಿದರನ್ನು ಗುರುತಿಸುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೪೨ (೧೬೦೦) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಲಾವಿದರು ವಿವಿಧ ಕಲೆಗಳಲ್ಲಿ ಗುರುತಿಸಿಕೊಂಡಿರುವ ಬಗ್ಗೆ ಸರ್ಕಾರದಲ್ಲಿ ಮಾಹಿತಿ ಇದೆಯೇ ; ಇದ್ದಲ್ಲಿ, ವಿವರ ನೀಡುವುದು ;

(ಆ) ಈ ಕಲಾವಿದರಿಗೆ ಪ್ರೋತ್ಸಾಹ ನೀಡಲು ಸರ್ಕಾರದಿಂದ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ; (ವಿವರ ನೀಡುವುದು)

(ಇ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅನುಷ್ಠಾನ ಮಾಡಿರುವ ಕಾರ್ಯಕ್ರಮಗಳು ಯಾವುವು ; ವೆಚ್ಚವಾದ ಅನುದಾನ ಹಾಗೂ ಬಳಕೆಯಾಗದೆ ಉಳಿದ ಅನುದಾನ ಎಷ್ಟು ; ಉಳಿಕೆಗೆ ಕಾರಣ ನೀಡುವುದು ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಜಿಲ್ಲೆಯಲ್ಲಿ ಅನುಷ್ಠಾನ ಮಾಡಿರುವ ಕಾರ್ಯಕ್ರಮಗಳು, ವೆಚ್ಚವಾದ ಅನುದಾನ, ಬಳಕೆಯಾಗದೆ ಉಳಿದ ಅನುದಾನ, ಉಳಿಕೆಗೆ ಕಾರಣ ಏನು ?

## ರಾಯಚೂರು ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೩ (೧೬೧೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ರಾಯಚೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಸ್ಥಳವನ್ನಾಗಿ ಗುರುತಿಸಲಾಗಿರುವ ಕ್ಷೇತ್ರಗಳು ಯಾವುವು ;

(ಆ) ರಾಯಚೂರು ನಗರದ ಪುರಾತನವಾಗಿರುವ ಮಲಿಯಾಬಾದ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳು ಎಷ್ಟು ; ಸದರಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ನೀಡಿರುವ ಅನುದಾನ ಎಷ್ಟು ?

## ರಾಯಚೂರು ನಗರದಲ್ಲಿ ಕ್ರೀಡಾ ತರಬೇತಿ ಕೇಂದ್ರ ಹಾಗೂ ವಸತಿ ಶಾಲೆ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪೪ (೧೬೨೧) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಕ್ರೀಡಾಂಗಣಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ಕ್ರೀಡಾ ತರಬೇತಿ ಹಾಗೂ ಕ್ರೀಡಾ ವಸತಿ ಶಾಲೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಪ್ರಸ್ತುತ ರಾಯಚೂರು ನಗರದಲ್ಲಿ ಯಾವ ಕ್ರೀಡೆಗಳಿಗೆ ಪ್ರೋತ್ಸಾಹಿಸಲು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ?

## ಗ್ರಾಮಾಂತರ ಪ್ರದೇಶಗಳಿಗೆ ಬಸ್ ಸೌಲಭ್ಯ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೫ (೧೬೩೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಜಿಲ್ಲಾ ಕೇಂದ್ರದಿಂದ ಎಲ್ಲಾ ಗ್ರಾಮಾಂತರ ಪ್ರದೇಶಗಳಿಗೂ ಸಾರಿಗೆ ಸಂಸ್ಥೆಯ ಬಸ್ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ ; ಬಸ್ ಸೌಲಭ್ಯ ಇಲ್ಲದಿರುವ ಸ್ಥಳಗಳು ಇವೆಯೇ ; ಈ ಬಗ್ಗೆ ಸರ್ಕಾರ ಸಮೀಕ್ಷೆ ನಡೆಸಿದೆಯೇ ;

(ಆ) ಬಸ್ ಸೌಲಭ್ಯ ಇಲ್ಲದಿರುವ ಊರುಗಳಿಗೆ ಬಸ್ ಸೌಲಭ್ಯವನ್ನು ಎಷ್ಟು ದಿವಸಗಳಲ್ಲಿ ಕಲ್ಪಿಸಲಾಗುವುದು ;

(ಇ) ಸಾರ್ವಜನಿಕರಿಂದ ಈ ಬಗ್ಗೆ ಈವರೆವಿಗೂ ಸ್ವೀಕರಿಸಲಾದ ಮನವಿಗಳ ಸಂಖ್ಯೆ ಎಷ್ಟು ?

## ಆಡಳಿತದಲ್ಲಿ ಕನ್ನಡ ಬಳಕೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೬ (೧೬೩೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಭಾಷಾ ನೀತಿಯಂತೆ ಸರ್ಕಾರಿ ಕಛೇರಿಗಳಲ್ಲಿ ಕನ್ನಡ ಬಳಕೆ ಸಮರ್ಪಕವಾಗಿ ಆಗುತ್ತಿದೆಯೇ ಎಂಬುದನ್ನು ತಪಾಸಣೆ ಮಾಡಲು ಸರ್ಕಾರದಲ್ಲಿ ಯಾವ ವ್ಯವಸ್ಥೆ ಇದೆ ; ತಪಾಸಣೆ ಮಾಡುವವರು ಯಾರು ;



(ಆ) ಹಿಂದೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಸರ್ಕಾರಿ ಕಛೇರಿಗಳಿಗೆ ಭೇಟಿ ನೀಡಿ ಕಡತಗಳಲ್ಲಿ ಕನ್ನಡ ಬಳಸದಿರುವ ಅಧಿಕಾರಿಗಳಿಗೆ ನೋಟಿಸ್ ನೀಡಿ ಕ್ರಮ ಕೈಗೊಳ್ಳುವ ಪದ್ಧತಿ ಜಾರಿಯಲ್ಲಿದ್ದು ಪ್ರಸ್ತುತ ಈ ಪದ್ಧತಿಯನ್ನು ಮುಂದುವರೆಸಲಾಗಿದೆಯೇ ;

(ಇ) ಆಡಳಿತದಲ್ಲಿ ಕನ್ನಡ ಬಳಕೆ ಮಾಡದ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ; (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

(ಈ) ಕಛೇರಿಗಳಲ್ಲಿ ಕನ್ನಡ ಬಳಕೆಗೆ ಪೂರಕವಾದ ಕಛೇರಿ ಕೈಪಿಡಿ, ಆಡಳಿತ ಪದಕೋಶ ಮುಂತಾದ ಪುಸ್ತಕಗಳನ್ನು ಇಲಾಖೆಯಿಂದ ಸರ್ಕಾರಿ ಕಛೇರಿಗಳಿಗೆ ಹಂಚಿಕೆ ಮಾಡಲಾಗುತ್ತಿತ್ತು ; ಪ್ರಸ್ತುತ ಹಂಚಿಕೆ ಮಾಡುವುದನ್ನು ಮುಂದುವರೆಸಲಾಗಿದೆಯೇ ?

## ಹಾಸನ ಜಿಲ್ಲೆಯಲ್ಲಿರುವ ಅಂಗನವಾಡಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೭ (೧೫೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿರುವ ಅಂಗನವಾಡಿಗಳ ಸಂಖ್ಯೆ ಮತ್ತು ಮಿನಿ ಅಂಗನವಾಡಿಗಳ ಸಂಖ್ಯೆ ಎಷ್ಟು ; ಇಲ್ಲಿ ದಾಖಲಾಗಿರುವ ಮಕ್ಕಳ ಸಂಖ್ಯೆಯೆಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕಳೆದ ೫ ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಮಂಜೂರಾದ ಅಂಗನವಾಡಿ ಮತ್ತು ಮಿನಿ ಅಂಗನವಾಡಿ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಜಿಲ್ಲೆಯಲ್ಲಿ ಯಾವ ಯಾವ ಅಂಗನವಾಡಿ ಮತ್ತು ಮಿನಿ ಅಂಗನವಾಡಿಗಳು ಸ್ವಂತ ಕಟ್ಟಡ, ಬಾಡಿಗೆ ಕಟ್ಟಡ ಮತ್ತು ಸರ್ಕಾರಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಈ ಕಟ್ಟಡಗಳು ಸುಸ್ಥಿತಿಯಲ್ಲಿವೆಯೇ ; ಅಂಗನವಾಡಿವಾರು ಪೂರ್ಣ ವಿವರ ಒದಗಿಸುವುದು ;

(ಈ) ಇಲಾಖೆವತಿಯಿಂದ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆಗಳು ಯಾವುವು ; ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಎಲ್ಲಾ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ ? (ಫಲಾನುಭವಿಗಳ ಪಟ್ಟಿ ಸಹಿತ ವಿವರ ಒದಗಿಸುವುದು)

## ಗ್ರಾಮೀಣಾ ಭಾಗದ ಕಲೆಗಳು ಮತ್ತು ಕಲಾವಿದರ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೮ (೧೩೪೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮೀಣಾ ಭಾಗದಲ್ಲಿ ಕಲೆಗಳು ಮತ್ತು ಈ ಕಲೆಗಳನ್ನು ಪ್ರಚಾರ ಮಾಡುವ ಕಲಾವಿದರನ್ನು ಗುರುತಿಸಿ ಇವರಿಗೆ ಮನ್ನಣೆ ನೀಡದಿರುವುದರಿಂದ ಗ್ರಾಮೀಣಾ ಭಾಗದ ಕಲೆಗಳು ಅವಸಾನದ ಅಂಚಿಗೆ ತಲುಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಗ್ರಾಮೀಣಾ ಭಾಗದ ಕಲೆಗಳನ್ನು ಜೀವಂತವಾಗಿರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಗ್ರಾಮೀಣಾ ಭಾಗದ ಕಲಾವಿದರು ಸಂಘಟಿತರಾಗಿ ಕಲಾ ಸಂಘ/ ಸಂಸ್ಥೆಗಳನ್ನು ಸ್ಥಾಪನೆ ಮಾಡಿಕೊಂಡು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಬರುವ ಅವಕಾಶಗಳನ್ನು ಮತ್ತು ಸಹಾಯ ಧನವನ್ನು ಪಡೆಯುವಲ್ಲಿ ವಿಫಲರಾಗುತ್ತಿದ್ದು, ಗ್ರಾಮೀಣಾ ಭಾಗದ ಕಲಾವಿದರನ್ನು ಗುರುತಿಸಿ ಅವರಿಗೆ ಸಿಗಬೇಕಾದ ಅವಕಾಶ/ ಸೌಲಭ್ಯಗಳನ್ನು ತಲುಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)



(ಇ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿರುವ ಕಲಾ ಸಂಘ/ಸಂಸ್ಥೆಗಳು ಯಾವುವು ; ಕಳೆದ ೩ ವರ್ಷಗಳಲ್ಲಿ ಈ ಕಲಾ ಸಂಘ/ಸಂಸ್ಥೆಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪಡೆದಿರುವ ಸಹಾಯ ಧನದ ವಿವರ ನೀಡುವುದು ?

## ಖಾಸಗಿ ಬಸ್ಸು ರಹದಾರಿಗಳ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೩೪೯ (೧೬೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಸಗಿ ಬಸ್ಸು ರಹದಾರಿಗಳನ್ನು ರಾಷ್ಟ್ರೀಕೃತಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದರೆ, ವಿವರ ನೀಡುವುದು ;

(ಆ) ರಾಜ್ಯದಲ್ಲಿ ಎಷ್ಟು ಖಾಸಗಿ ಬಸ್ಸುಗಳು ಕಾರ್ಯನಿರ್ವಹಿಸುತ್ತಿವೆ ; ಇದರಿಂದ ರಾಜ್ಯ ಸಾರಿಗೆ ಇಲಾಖೆಗೆ ಉಂಟಾಗುವ ತೊಂದರೆಗಳೇನು ; ಯಾವ ಯಾವ ಜಿಲ್ಲೆಗೆ ತೊಂದರೆಯುಂಟಾಗಿದೆ ;

(ಇ) ಪ್ರಸ್ತುತ, ಮಂಗಳೂರು ನಗರದಲ್ಲಿ ಸಂಚರಿಸುವ ನಗರ ಸಾರಿಗೆ ಬಸ್ಸುಗಳೆಷ್ಟು ; ಯಾವ ಜಿಲ್ಲೆಗಳಲ್ಲಿ ನಗರ ಸಾರಿಗೆ ಬಸ್ಸುಗಳನ್ನು ಸಂಚಾರಕ್ಕೆ ಹಾಕಲಾಗಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಲ್ಲಾ ಮಾರ್ಗಗಳನ್ನು ರಾಷ್ಟ್ರೀಕರಣಗೊಳಿಸಿದರೆ ರಾಜ್ಯ ಸರ್ಕಾರಕ್ಕೆ ಎಷ್ಟು ಹಣಕಾಸಿನ ಹೊರೆಯಾಗುವ ಸಾಧ್ಯತೆ ಇದೆ ; (ವಿವರ ನೀಡುವುದು)

(ಉ) ಖಾಸಗಿ ಎಷ್ಟು ಮಾಲೀಕರು ಲಾಭ ಬರುವ ಮಾರ್ಗಗಳಲ್ಲಿ ಮಾತ್ರ ಬಸ್ಸುಗಳನ್ನು ಒದಗಿಸುತ್ತಾರೆ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಕ್ರೈಸ್ತ ಅಲ್ಪಸಂಖ್ಯಾತರ ಪರಿಷತ್‌ನಿಂದ ಬಿಡುಗಡೆ ಮಾಡಿದ ಅನುದಾನ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೩೫೦ (೧೬೦೩) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭, ೨೦೧೭–೧೮, ೨೦೧೯–೨೦ರಲ್ಲಿ ರಾಜ್ಯದಲ್ಲಿ ಕ್ರೈಸ್ತ ಅಲ್ಪಸಂಖ್ಯಾತರ ಪರಿಷತ್‌ನಿಂದ ಚರ್ಚ್‌ಗಳ ದುರಸ್ಥಿ, ಸ್ಮಶಾನಗಳ ಅಭಿವೃದ್ಧಿ, ಸಮುದಾಯ ಭವನ, ಚರ್ಚ್‌ಗಳ ತಡೆಗೋಡೆ ನಿರ್ಮಾಣಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೮–೧೯, ೨೦೧೯–೨೦ರಲ್ಲಿ ಎಷ್ಟು ಹಣವನ್ನು ಬಿಡುಗಡೆಗೊಳಿಸಲಾಗಿದೆ ; (ವಿವರ ನೀಡುವುದು)



(ಇ) ಕ್ರೈಸ್ತ ಅಭಿವೃದ್ಧಿ ಪರಿಷತ್‌ಗೆ ೨೦೧೯–೨೦ರ ಸಾಲಿನ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಉಪಯೋಗಿಸಲಾಗಿದೆ ? (ವಿವರ ನೀಡುವುದು)

## ಮಕ್ಕಳ ಹಕ್ಕು ರಕ್ಷಣಾ ಆಯೋಗದಲ್ಲಿ ದಾಖಲಾದ ಪ್ರಕರಣಗಳ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೩೫೧ (೧೬೦೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯, ೨೦೧೯–೨೦ರಲ್ಲಿ ಮಕ್ಕಳ ಹಕ್ಕು ರಕ್ಷಣಾ ಆಯೋಗದಲ್ಲಿ ದಾಖಲಾದ ಪ್ರಕರಣಗಳೆಷ್ಟು ; ಬಾಕಿ ಇರುವ ಪ್ರಕರಣಗಳೆಷ್ಟು ; ಇದ್ದರೆ, ಕಾರಣಗಳೇನು ; (ವಿವರ ನೀಡುವುದು)

(ಆ) ಈ ಪ್ರಕರಣ ಇತ್ಯರ್ಥಪಡಿಸಲು ವಕೀಲರುಗಳ ಸಹಾಯ ಪಡೆಯಲಾಗಿದೆಯೇ ; (ವಿವರ ನೀಡುವುದು)

(ಇ) ಆಯೋಗ ಇತ್ಯರ್ಥಪಡಿಸಿದ ಕೇಸುಗಳನ್ನು ಉಚ್ಛ ನ್ಯಾಯಾಲಯದಲ್ಲಿ ಪ್ರಶ್ನಿಸಲಾಗಿದೆಯೇ ; ಈ ಸಂದರ್ಭದಲ್ಲಿ ಉಚ್ಛ ನ್ಯಾಯಾಲಯದಲ್ಲಿ ವಾದಿಸಲು ವಕೀಲರುಗಳನ್ನು ನೇಮಿಸಲಾಗಿದೆಯೇ ; (ವಿವರ ನೀಡುವುದು)

(ಈ) ನ್ಯಾಯಮೂರ್ತಿ ಎಂ.ಕೆ ಪಾಟೀಲ್ ಸಮಿತಿ ಮಕ್ಕಳ ರಕ್ಷಣೆಯ ಬಗ್ಗೆ ನೀಡಿದ ಸಲಹೆಗಳನ್ನು ಪೂರ್ಣವಾಗಿ ಅನುಷ್ಠಾನಗೊಳಿಸಲಾಗಿದೆಯೇ ; ಇಲ್ಲದಿದ್ದರೆ, ಕಾರಣಗಳೇನು ?

## ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) ಮತ್ತು**
**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೩೫೨ (೧೬೦೫+೧೬೫೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು ; ಸ್ವಂತ ಕಟ್ಟಡದಲ್ಲಿ/ ಬಾಡಿಗೆ ಕಟ್ಟಡದಲ್ಲಿರುವುದು ಎಷ್ಟು ; ಈ ಅಂಗನವಾಡಿಗಳ ಹೊರಾಂಗಣದಲ್ಲಿ ಆಟ–ಪಾಠಗಳಿಗೆ ಜಾಗ ಮೀಸಲಿರಿಸಲಾಗಿದೆಯೇ ;

(ಆ) ಅಂಗನವಾಡಿಗಳಲ್ಲಿ ಶೌಚಾಲಯವನ್ನು ಒದಗಿಸಲಾಗಿದೆಯೇ ; ಎಷ್ಟು ಅಂಗನವಾಡಿಗಳಲ್ಲಿ ಈ ಸೌಲಭ್ಯವಿರುವುದಿಲ್ಲ; ಸದರಿ ಸೌಲಭ್ಯಗಳನ್ನು ಪೂರ್ಣಗೊಳಿಸುವುದು ಯಾವಾಗ ; (ವಿವರ ನೀಡುವುದು)

(ಇ) ಎಲ್ಲಾ ಅಂಗನವಾಡಿ ಕಛೇರಿಗಳಲ್ಲಿ "ತಗಡು ಸೀಟು" ಮೇಲ್ಛಾವಣೆ ನಿರ್ಮಿಸಿರುವುದರಿಂದ ಬಿಸಿಲಿನ ತಾಪದಿಂದ ಮಕ್ಕಳು ಬಳಲುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ರಾಜ್ಯದಲ್ಲಿರುವ ಈ ರೀತಿ ಕಟ್ಟಡಗಳು ಎಷ್ಟು ; (ವಿವರ ಒದಗಿಸುವುದು)

(ಈ) ಹೊರಾಂಗಣ ಆಟಕ್ಕಾಗಿ ಸ್ಥಳದ ಕೊರತೆ ಇರುವ ಅಂಗನವಾಡಿ ಕೇಂದ್ರಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು) ಹೊರಾಂಗಣ ಆಟಗಳಿಗೆ ಸಂಬಂಧಿಸಿದಂತೆ ಎಷ್ಟು ಅಂಗನವಾಡಿಗಳಲ್ಲಿ ಆಟಿಕೆಗಳನ್ನು ನೀಡಲಾಗಿದೆ ;



(ಉ) ಸರ್ಕಾರ ಹೊರಾಂಗಣದ ಆಟಿಕೆಗಳಿಗಾಗಿ ನೀಡಿದ ಹಣವೆಷ್ಟು ; ಹಾಗೂ ಅದರಲ್ಲಿ ಖರ್ಚಾದ ಹಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ರಾಜ್ಯದಲ್ಲಿ ಪ್ರತಿ ಬುಧವಾರ ಮತ್ತು ಶುಕ್ರವಾರ ಅಂಗನವಾಡಿ ಮಕ್ಕಳಿಗೆ 'ಮೊಟ್ಟೆ' ನೀಡುವ ಕಾರ್ಯಕ್ರಮಗಳು ಇದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ರಂಗಾಯಣಗಳ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೩೫೩ (೧೬೪೯) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರಂಗಾಯಣಗಳು ಎಷ್ಟು ; (ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ರಂಗಾಯಣ ಸ್ಥಾಪಿಸಲಾಗಿದೆಯೇ ; ಹಾಗಿದ್ದಲ್ಲಿ, ಕಾಮಗಾರಿಗಳು ಯಾವ ಹಂತದಲ್ಲಿವೆ ; ಮತ್ತು ಎಂದು ಪೂರ್ಣಗೊಳಿಸಲಾಗುವುದು ?

## ಬಾಲಭವನ ಸ್ಥಾಪಿಸುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೩೫೪ (೧೬೫೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ಬೀದರ್ ಜಿಲ್ಲೆಯಲ್ಲಿ ಬಾಲಭವನ ಸ್ಥಾಪಿಸುವ ಪ್ರಸ್ತಾವನೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಉಡುಪಿ ಜಿಲ್ಲೆಯ ಕಾರ್ಕಳದಲ್ಲಿ ಬಾಲಭವನ ನಿರ್ಮಿಸುವ ಕಾರ್ಯ ಯಾವ ಹಂತದಲ್ಲಿದೆ ; (ಪೂರ್ಣ ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ಈಗಾಗಲೇ ೨ ಟಾಯ್ –ಟ್ರೈನ್‌ಗಳನ್ನು ಬಾಲಭವನಕ್ಕೆ ನೀಡುವ ಪ್ರಸ್ತಾವನೆ ಇದ್ದು, ಅದನ್ನು ಪಡೆದುಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ರಾಜ್ಯದ ೩೦ ಜಿಲ್ಲೆಗಳಲ್ಲೂ ಬಾಲಭವನ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಮಕ್ಕಳು ಅಪೌಷ್ಠಿಕತೆಯಿಂದ ಮರಣ ಹೊಂದುತ್ತಿರುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೩೫೫ (೧೬೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಅಪೌಷ್ಠಿಕತೆಯಿಂದ ಮರಣ ಹೊಂದುತ್ತಿರುವುದು ಹಾಗೂ ಅಂಗವೈಕಲ್ಯದಿಂದ ನರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಅಪೌಷ್ಠಿಕತೆಯಿಂದ ನರಳುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)



(ಇ) ಅಪೌಷ್ಠಿಕತೆಯನ್ನು ದೂರ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ಹಾಗೂ ಇದರ ಮೂಲ ಕಾರಣವೇನು ?

## ಎಲೆಕ್ಟ್ರಿಕಲ್ ಬಸ್ ಖರೀದಿಯ ಅಥವಾ ಗುತ್ತಿಗೆ ಮೇಲೆ ತೆಗೆದುಕೊಳ್ಳುವ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್.) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫೬ (೧೯೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಯು ಮಾಲಿನ್ಯವನ್ನು ತಡೆಗಟ್ಟುವ ಹಿನ್ನಲೆಯಲ್ಲಿ ಈ ಹಿಂದೆ ಎಲೆಕ್ಟ್ರಿಕ್ ಬಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ/ಬಿ.ಎಂ.ಟಿ.ಸಿ ಗೆ ಗುತ್ತಿಗೆ ಆಧಾರದ ಮೇಲೆ ಅಥವಾ ಖರೀದಿಗಾಗಿ ತೆಗೆದುಕೊಳ್ಳಲು ಸರ್ಕಾರ ತೀರ್ಮಾನ ಕೈಗೊಂಡಿದೆಯೇ ;

(ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಯಾವ ಹಂತದಲ್ಲಿ ಇದೆ ; ಇಷ್ಟೊಂದು ವಿಳಂಬವಾಗಲು ಕಾರಣಗಳೇನು ; (ವಿವರ ನೀಡುವುದು)

(ಇ) ಅಲ್ಲದೆ, ಈ ಎಲೆಕ್ಟ್ರಿಕ್ ಬಸ್‌ಗಳಿಗೆ ಕೇಂದ್ರ ಸರ್ಕಾರ ಸಹಾಯಧನ ನೀಡಿದ್ದರು ಸಹ ಈ ಸಹಾಯಧನವನ್ನು ಬಳಸಿಕೊಳ್ಳದೆ ವಿಳಂಬ ಧೋರಣೆಯಿಂದ ಕೇಂದ್ರ ಸರ್ಕಾರದ ಸಹಾಯಧನ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ವಿಳಂಬ ಧೋರಣೆಗೆ ಕಾರಣರಾದ ಅಧಿಕಾರಿ ಯಾರು ; ಆ ಅಧಿಕಾರಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಶ್ರೀ ಮಲೈಮಹದೇಶ್ವರ ಬೆಟ್ಟದಲ್ಲಿನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೪೭(೧೬೨೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆ ವತಿಯಿಂದ ಚಾಮರಾಜನಗರ ಜಿಲ್ಲೆಯ ಶ್ರೀ ಮಲೈಮಹದೇಶ್ವರ ಬೆಟ್ಟದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳಾವುವು ; (ವಿವರ ನೀಡುವುದು)

(ಆ) ಸದರಿ ಯೋಜನೆಯ ಅಂದಾಜು ಮೊತ್ತವೆಷ್ಟು ; (ವಿವರ ನೀಡುವುದು)

(ಇ) ಈ ಕಾಮಗಾರಿಗಳು ಯಾವ ಹಂತದಲ್ಲಿವೆ ;

(ಈ) ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಕುಕ್ಕುಟೋದ್ಯಮದಲ್ಲಿ ನಷ್ಟ ಉಂಟಾಗಿರುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೪೮ (೧೬೩೦) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದೆರಡು ತಿಂಗಳಲ್ಲಿ ರಾಜ್ಯ ಕುಕ್ಕುಟೋದ್ಯಮದಲ್ಲಿ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಈ ರೀತಿ ನಷ್ಟ ಉಂಟಾಗಲು ಕಾರಣಗಳೇನು ; (ವಿವರ ನೀಡುವುದು)

(ಇ) ಯಾವ ಪ್ರಮಾಣದಲ್ಲಿ ನಷ್ಟ ಉಂಟಾಗಿದೆ ; (ವಿವರ ನೀಡುವುದು)

(ಈ) ಸದರಿ ಉದ್ಯಮವನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಕುಕ್ಕುಟೋದ್ಯಮವನ್ನು ಅಭಿವೃದ್ಧಿ ಪಡಿಸಲು ಕ್ರಮ ವಹಿಸಲಾಗುವುದು ?

## ಮಹಿಳೆಯರಿಗೆ, ಗರ್ಭಿಣಿಯರಿಗೆ ಮತ್ತು ಮಕ್ಕಳಿಗೆ ನೀಡಲಾಗಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೩೪೯ (೧೬೩೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮಹಿಳೆಯರಿಗೆ, ಗರ್ಭಿಣಿ ಸ್ತ್ರೀಯವರಿಗೆ ಮತ್ತು ಮಕ್ಕಳಿಗೆ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಭಾಗ್ಯಲಕ್ಷ್ಮಿ ಹಾಗೂ ಮಡಿಲು ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಫಲಾನುಭವಿಗಳ ಆಯ್ಕೆಯ ಮಾನದಂಡಗಳೇನು ; (ವಿವರ ನೀಡುವುದು)

(ಈ) ಈ ಫಲಾನುಭವಿಗಳಿಗೆ ಪ್ರೋತ್ಸಾಹಧನ ಹಾಗೂ ಇನ್ನಿತರೆ ಸವಲತ್ತುಗಳನ್ನು ಪೂರ್ಣ ಪ್ರಮಾಣದಲ್ಲಿ ವಿತರಣೆ ಮಾಡಲಾಗಿದೆಯೇ ;

(ಉ) ಬಾಕಿ ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು ?

## ಗ್ರಾಮ ಸಭೆಗೆ ಗೈರುಹಾಜರಾಗುವ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೦ (೧೬೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ೯೭ ಗ್ರಾಮ ಪಂಚಾಯಿತಿಗಳಲ್ಲಿ ವರ್ಷಕ್ಕೆ ಎರಡು ಬಾರಿ ನಡೆಸುವ ಗ್ರಾಮ ಸಭೆಗೆ ಸರ್ಕಾರದ ಇಲಾಖೆಯ ಅಧಿಕಾರಿಗಳು ಹಾಜರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ನೋಟಿಸ್ ನೀಡಿರುವುದು ಮತ್ತು ಯಾವುದೇ ರೀತಿಯ ಕ್ರಮ ಕೈಗೊಳ್ಳದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ;

(ಇ) ಹಾಗಾದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ಸಂಪೂರ್ಣ ವಿವರ ನೀಡುವುದು ?



## ತೆಗ್ಗಿ ಗ್ರಾಮದಲ್ಲಿ ಸಾಮೂಹಿಕ ಶೌಚಾಲಯ ನಿರ್ಮಿಸುವ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೩೬೧ (೧೬೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ ಬೀಳಗಿ ತಾಲ್ಲೂಕಿನ ತೆಗ್ಗಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ತೆಗ್ಗಿ ಗ್ರಾಮ ಸಾವಿರಾರು ಜನಸಂಖ್ಯೆಯುಳ್ಳ ಗ್ರಾಮವಾಗಿದ್ದು ಹಾಗೂ ಸದರಿ ಗ್ರಾಮವು ಗ್ರಾಮ ಪಂಚಾಯಿತಿಯ ಕೇಂದ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರಿಗೆ ಹಾಗೂ ಗ್ರಾಮಸ್ಥರಿಗೆ ಸಾಮೂಹಿಕ ಶೌಚಾಲಯ ಇಲ್ಲದಿರುವುದು ನಿಜವೇ ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಗ್ರಾಮ ಪಂಚಾಯಿತಿಯಲ್ಲಿ ಸಾರ್ವಜನಿಕರಿಗೆ ಹಾಗೂ ಗ್ರಾಮಸ್ಥರಿಗೆ ಅನುಕೂಲವಾಗುವ ರೀತಿಯಲ್ಲಿ ಶೌಚಾಲಯ ನಿರ್ಮಿಸುವಂತೆ ಹಲವು ಭಾರಿ ಮನವಿ ಮಾಡಿಕೊಂಡಿರುವುದು ನಿಜವೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸಾರ್ವಜನಿಕ ಉಪಯೋಗಕ್ಕಾಗಿ ಸಾಮೂಹಿಕ ಶೌಚಾಲಯ ನಿರ್ಮಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಗ್ರಾಮ ಪಂಚಾಯಿತಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಬಸ್ ನಿಲ್ದಾಣ ಮತ್ತು ಸೇಡಜಿ ಪ್ಲಾಟ್ (ಲಡ್ಡು ಮುತ್ಯಾನ ಗುಡಿ ಹತ್ತಿರ) ಬಡಾವಣೆಯಲ್ಲಿ ಶೌಚಾಲಯ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ಜೈನ ಸಮುದಾಯಕ್ಕೆ ನೀಡುತ್ತಿರುವ ಅನುದಾನದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೩೬೨ (೧೬೪೩) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಯಾವ ಯಾವ ಯೋಜನೆಯ ಅಡಿಯಲ್ಲಿ ಅನುದಾನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಜೈನ ಸಮುದಾಯಕ್ಕೆ ನೀಡಿರುವ ಅನುದಾನದ ಮಾಹಿತಿಯನ್ನು ತಾಲ್ಲೂಕುವಾರು ವಿವರ ನೀಡುವುದು ?

## ಪಂಚಾಯತ್ ರಾಜ್ ಇಲಾಖೆಯ ಪದೋನ್ನತಿಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೩೬೩ (೧೫೬೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಬಿಲ್ ಕಲೆಕ್ಟರ್ ಹುದ್ದೆಯಿಂದ ಕಾರ್ಯದರ್ಶಿ ಹುದ್ದೆಗೆ, ಹಾಗೂ ಕಾರ್ಯದರ್ಶಿ ಹುದ್ದೆಯಿಂದ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ, ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಿಂತ ಉನ್ನತ ಹುದ್ದೆಗೆ ಪದೋನ್ನತಿ ಹೊಂದಿದವರ ಸಂಖ್ಯೆ ಎಷ್ಟು ;

(ಆ) ಈ ರೀತಿಯಾದಂತ ಪದೋನ್ನತಿಯನ್ನು ನೀಡಲು ಅನುಸರಿಸಬೇಕಾದಂತಹ ಮಾನದಂಡಗಳೇನು ?



## ರಾಜ್ಯದಲ್ಲಿನ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕಂದಾಯಕ್ಕೆ ಒಳಪಡದೆ ಅಕ್ರಮ ಒಳಪಡುವ ಕಟ್ಟಡಗಳ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೪ (೧೫೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಕಂದಾಯಕ್ಕೆ ಒಳಪಡದೆ ಅಕ್ರಮವಾಗಿ ಅನಧಿಕೃತ ಕಟ್ಟಡಗಳಿರುವುದು/ಅಂಗಡಿಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿನ ಎಷ್ಟು ಗ್ರಾಮಪಂಚಾಯಿತಿ ವ್ಯಾಪ್ತಿಗಳಲ್ಲಿ ಅನಧಿಕೃತ ಕಟ್ಟಡಗಳು/ಅಂಗಡಿಗಳು/ಮನೆಗಳು ಇವೆ ? (ಅವುಗಳ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿಗಳಲ್ಲಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೫ (೧೫೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಗಳಲ್ಲಿ ಹಲವಾರು ವರ್ಷಗಳಿಂದ ಕೆಲಸ ಮಾಡುತ್ತಿರುವ ಪೌರಕಾರ್ಮಿಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರು ನಿವೃತ್ತಿ ಅಂಚಿನಲ್ಲಿದ್ದರೂ ಸಹ ಅವರುಗಳು ಸವಲತ್ತುಗಳಿಂದ ವಂಚಿತರಾಗುತ್ತಿದ್ದು, ಅಂತಹ ಕಾರ್ಮಿಕರನ್ನು ಖಾಯಂಗೊಳಿಸಿ ಅವರಿಗೆ ಸಿಗಬೇಕಾದ ಸವಲತ್ತುಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಇ) ಪೌರಕಾರ್ಮಿಕರು ಕೆಲಸ ಮಾಡುವ ಸಮಯದಲ್ಲಿ ಆರೋಗ್ಯದಲ್ಲಿ ಏರುಪೇರು ಆದಾಗ ಮತ್ತು ಅಪಘಾತಗಳು ಸಂಭವಿಸಿದಾಗ ಅವರಿಗೆ ಯಾವ ರೀತಿ ಸೌಲಭ್ಯಗಳನ್ನು ನೀಡಲಾಗುತ್ತಿದೆ ?

## ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ವಿವರ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೬ (೧೫೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗ್ರಾಮಪಂಚಾಯಿತಿಗಳ ಸಂಖ್ಯೆ ಎಷ್ಟು ;

(ಆ) ಶಿವಮೊಗ್ಗ ಜಿಲ್ಲೆ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಎಲ್ಲಾ ಗ್ರಾಮಪಂಚಾಯಿತಿಗಳಲ್ಲಿ ಪಿಡಿಓಗಳು ಇದ್ದಾರೆಯೇ ;

(ಇ) ಪಿಡಿಓಗಳು ಇಲ್ಲದಿದ್ದಲ್ಲಿ, ಎಷ್ಟು ಪಿಡಿಓಗಳ ಕೊರತೆಯಾಗಿದೆ; ಈ ಕೊರತೆಯನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ;

(ಈ) ಸದರಿ ಗ್ರಾಮಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಿಬ್ಬಂದಿಗಳೆಷ್ಟು; (ಬಿಲ್ ಕಲೆಕ್ಟರ್, ನೀರು ವಿತರಕ, ವಾಲ್ ಮ್ಯಾನ್, ಜವಾನ, ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾಗಾರ ಇತರೆ ಸಿಬ್ಬಂದಿಗಳ ವಿವರವಾದ ಮಾಹಿತಿ ನೀಡುವುದು)



(ಉ) ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆಯಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಹಾಗೂ ಅನುಮೋದನೆಗೊಳ್ಳದೆ ಬಾಕಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಊ) ಬಾಕಿ ಇರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ಅನುಮೋದನೆ ನೀಡಿ ಆದೇಶ ಹೊರಡಿಸಲಾಗುವುದು ? (ಮಾಹಿತಿ ನೀಡುವುದು)

## ಶಿವಮೊಗ್ಗ ಜಿಲ್ಲೆಗೆ ಮಂಜೂರು ಆಗಿರುವ ಶುದ್ಧ ನೀರಿನ ಘಟಕ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬೭ (೧೫೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಇಲ್ಲಿಯವರೆಗೂ ಮಂಜೂರು ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು, ನಿರ್ಮಾಣ ಹಂತದಲ್ಲಿರುವ ಘಟಕಗಳ ಸಂಖ್ಯೆ ಎಷ್ಟು ; ಹಾಗೂ ಸದರಿ ಘಟಕಗಳಿಗೆ ಬಿಡುಗಡೆಯಾಗಿರುವ ಖರ್ಚಾದ ಹಾಗೂ ಬಾಕಿ ಇರುವ ಅನುದಾನವೆಷ್ಟು; ತಾಲ್ಲೂಕುವಾರು, ಗ್ರಾಮ ಪಂಚಾಯತಿವಾರು, ಗ್ರಾಮವಾರು ಪ್ರತಿ ಘಟಕದ ವಿವರ ನೀಡುವುದು ;

(ಆ) ಶಿವಮೊಗ್ಗ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಯೋಜನೆಯಲ್ಲಿ ಎಷ್ಟು ಘಟಕಗಳನ್ನು ಮಂಜೂರು ಮಾಡಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿಗೆ ಕೊಳವೆ ಬಾವಿಗಳನ್ನು ಕೊರೆಯಿಸಿ ಪಂಪ್ ಅಳವಡಿಸುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೬೮ (೧೬೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುತ್ತಿರುವುದರಿಂದ ಕೊಳವೆ ಬಾವಿಗಳನ್ನು ಕೊರೆದು ಪಂಪ್ ಮೋಟಾರ್ ಅಳವಡಿಸಿ ವಿದ್ಯುದ್ದೀಕರಣಗೊಳಿಸಲು ಪ್ರತಿ ಘಟಕಕ್ಕೆ ನಿಗಧಿಪಡಿಸಿರುವ ಅನುದಾನ ಎಷ್ಟು ;

(ಆ) ಸರ್ಕಾರ ೨೦೧೮–೧೯ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿಗಳಿಗೆ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಬಿಡುಗಡೆ ಮಾಡಲಾದ ಅನುದಾನ ಅತ್ಯಲ್ಪವಾಗಿರುವುದರಿಂದ ಕೊರೆದ ಕೊಳವೆ ಬಾವಿಗಳಿಗೆ ಪಂಪ್ ಮೋಟಾರ್ ಹಾಗೂ ವಿದ್ಯುದ್ದೀಕರಣ ಕಾಮಗಾರಿಗಳನ್ನು ಕೈಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ೨೦೧೯–೨೦ನೇ ಸಾಲಿನಲ್ಲಿ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಲಾಗುವುದೇ ;



(ಈ) ಗ್ರಾಮ ಪಂಚಾಯಿತಿಗಳಲ್ಲಿ ಸೋಲಾರ್ ದೀಪಗಳನ್ನು ಅಳವಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಉ) ಹಾಗಿದ್ದಲ್ಲಿ, ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಸೋಲಾರ್ ದೀಪಗಳನ್ನು ಅಳವಡಿಸಲು ನಿಗಧಿಪಡಿಸಿರುವ ಅನುದಾನ ಎಷ್ಟು ?

## ಪ್ರಸಕ್ತ ಸಾಲಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಅನುದಾನ ಬಿಡುಗಡೆ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೬೯ (೧೬೨೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ಯಾವ ಕಾರ್ಯಕ್ರಮಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; ಅನುದಾನ ಸಮರ್ಪಕವಾಗಿ ಬಳಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲಾ ಕೇಂದ್ರಗಳಲ್ಲಿರುವ ಕನ್ನಡ ಭವನಗಳ ನಿರ್ವಹಣೆಗೆ ಅನುದಾನ ಕೊರತೆ ಇದೆಯೇ ; ಇದ್ದಲ್ಲಿ, ಸರ್ಕಾರದಿಂದ ಯಾವ ರೀತಿಯ ಕ್ರಮ ತೆಗೆದುಕೊಳ್ಳಲಾಗಿದೆ ;

(ಇ) ಪ್ರಸಕ್ತ ಸಾಲಿನಲ್ಲಿ ಕಲಾ ತಂಡಗಳಿಗೆ ನೀಡುವ ಪ್ರೋತ್ಸಾಹ ಧನದ ವಿವರ ಒದಗಿಸವುದು ?

## ರಾಜ್ಯದಲ್ಲಿ ಮಹಿಳೆಯರ ಮತ್ತು ಮಕ್ಕಳ ಪೌಷ್ಠಿಕ ಆಹಾರ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೮೦ (೧೬೨೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಹಿಳೆಯರ ಆರೋಗ್ಯ, ಮಕ್ಕಳಿಗೆ ಪೌಷ್ಠಿಕ ಆಹಾರ ಭದ್ರತೆಯ ವಿಚಾರದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿ ಎಷ್ಟು ಹೊಸ ಅಂಗನವಾಡಿ ಬೇಡಿಕೆ ಇದೆ; ಪ್ರಸ್ತುತ ಅಂಗನವಾಡಿ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸತ್ತಿದೆಯೇ ; (ಮಾಹಿತಿ ನೀಡುವುದು)

(ಇ) ರಾಜ್ಯದ ಬರಪೀಡಿತ ಗ್ರಾಮೀಣ ಪ್ರದೇಶದ ಮಕ್ಕಳ ಅಪೌಷ್ಠಿಕತೆ ಹೋಗಲಾಡಿಸಲು ಸರ್ಕಾರದ ಮುಂದೆ ಯಾವ ಯೋಜನೆಯಿದೆ ; (ವಿವರ ನೀಡುವುದು)

(ಈ) ಕಳೆದ ೨ ವರ್ಷಗಳಲ್ಲಿ ರಾಜ್ಯದ ವೀಕಲಾಂಗರಿಗೆ ಎಷ್ಟು ತ್ರಿಚಕ್ರ ವಾಹನಗಳನ್ನು ಹಾಗೂ ಇತರ ಪರಿಕರಗಳನ್ನು ವಿತರಿಸಲಾಗಿದೆ ; (ವಿವರ ನೀಡುವುದು)

(ಉ) ಹಿರಿಯ ನಾಗರಿಕರ ಸಬಲೀಕರಣಕ್ಕೆ ಇದುವರೆವಿಗೂ ಸರ್ಕಾರ ಖರ್ಚು ಮಾಡಿದ ಹಣವೆಷ್ಟು ; ಯಾವ ಯೋಜನೆಗಳು ಫಲಾನುಭವಿಗಳಿಗೆ ತಲುಪಿದೆ ; ಯಾವ ಯೋಜನೆಗಳು ಇನ್ನೂ ಕಾರ್ಯಗತಗೊಂಡಿಲ್ಲ ? (ವಿವರ ನೀಡುವುದು)



## ಜವಳಿ ಪಾರ್ಕ್ ಸ್ಥಾಪನೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೧೩೮೧ (೧೬೬೪) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಹೊಸದಾಗಿ ಜವಳಿ ಪಾರ್ಕ್ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ಇದ್ದಲ್ಲಿ, ಎಷ್ಟು ಜವಳಿ ಪಾರ್ಕ್ ನಿರ್ಮಿಸುವ ಗುರಿಯನ್ನು ಹೊಂದಿದೆ ; ಇದಕ್ಕೆ ಎಷ್ಟು ಅನುದಾನವನ್ನು ಮೀಸಲಿರಿಸಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಯೋಜನೆಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೧೩೮೨ (೧೬೬೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಕಲಚೇತನರಿಗೆ ಮತ್ತು ಹಿರಿಯ ನಾಗರಿಕರಿಗೆ ಸರ್ಕಾರದಿಂದ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ ; (ವಿವರ ನೀಡುವುದು)

(ಆ) ಈ ಯೋಜನೆಗಳ್ನು ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಯೋಜನೆಗಳು ಸಕಾಲದಲ್ಲಿ ಫಲಾನುಭವಿಗಳಿಗೆ ತಲುಪುತ್ತಿದೆಯೇ ; ತಲುಪದೇ ಇದ್ದಲ್ಲಿ, ಸರಿಪಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಪಂಚಾಯತ್‌ಗಳಲ್ಲಿ ಸಿಬ್ಬಂದಿಗಳ ಹೆಚ್ಚಳದ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೭೩ (೧೫೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮಪಂಚಾಯಿತಿಗಳಲ್ಲಿ ಸಿಬ್ಬಂದಿ ಹೆಚ್ಚಳದ ಬಗ್ಗೆ ಕೇಂದ್ರ ಸರ್ಕಾರ, ರಾಜ್ಯಸರ್ಕಾರ, ವಿದೇಶಿ ಪ್ರಾಯೋಜಿತ ಯೋಜನೆಗಳು ಇತರೆ ಇಲಾಖೆಗಳ ಕರ್ತವ್ಯಗಳ ಕಾರ್ಯ ಹಂಚಿಕೆಗೆ ಅನುಗುಣವಾಗಿ ಕೆಲಸ ನಿರ್ವಹಿಸಲು ಸರ್ಕಾರವು ಮಂಜೂರಾತಿ ನೀಡಿರುವ ಸರ್ಕಾರೇತರ ಸ್ಥಳೀಯ ಸಂಸ್ಥೆಗಳು ಆಯ್ಕೆ ಮಾಡುವ ವೃಂದವಾರು ಅಥವಾ ಶ್ರೇಣಿವಾರು ವಿವರ ನೀಡುವುದು ;

(ಆ) ಗ್ರಾಮ ಪಂಚಾಯಿತಿಗಳ ಸಿಬ್ಬಂದಿಗಳ ಕಾರ್ಯ ಒತ್ತಡ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಿಬ್ಬಂದಿ ಹೆಚ್ಚಳದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಗ್ರಾಮ ಪಂಚಾಯಿತಿಯ ಡೆಟಾ ಎಂಟ್ರಿ ಆಪರೇಟರ್ ೦೧ ಹುದ್ದೆಯಿಂದ ಕ್ರ.ಸಂ. ೬ ರಲ್ಲಿ ನಮೂದಿಸಿರುವ ಸಾರ್ವಜನಿಕ ಕೆಲಸ ಕಾರ್ಯಗಳನ್ನು ನಿಗಧಿತ ಅವಧಿಯಲ್ಲಿ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಈ) ಗ್ರಾಮ ಪಂಚಾಯಿತಿಗಳು ನಿಗಧಿತ ಅವಧಿಯಲ್ಲಿ ಸೇವೆ ಒದಗಿಸುತ್ತಿವೆಯೇ ; ಒದಗಿಸದಿದ್ದಲ್ಲಿ, ಹೆಚ್ಚುವರಿಯಾಗಿ ನಿಯಮಾನುಸಾರ ಗ್ರಾಮ ಪಂಚಾಯಿತಿ ಸಿಬ್ಬಂದಿ ನೇಮಕ ಮಾಡಿಕೊಳ್ಳಲು ಹುದ್ದೆಗಳ ಮಂಜೂರಾತಿಯನ್ನು ಸರ್ಕಾರ ನೀಡುವುದೇ ? (ವಿವರ ನೀಡುವುದು)

## ಪ್ರವಾಸಿ ತಾಣಗಳ ಸೌಕರ್ಯ ಮತ್ತು ಅವುಗಳ ಅಭಿವೃದ್ಧಿಯ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೪ (೧೬೪೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪ್ರವಾಸಿ ತಾಣಗಳಿವೆ ಮತ್ತು ಅವುಗಳಲ್ಲಿ ನೈಸರ್ಗಿಕವಾಗಿ ರೂಪುಗೊಂಡಂತಹ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು ;

(ಆ) ಈ ಎಲ್ಲಾ ಪ್ರವಾಸಿ ತಾಣಗಳು ಪ್ರವಾಸಿಗರಿಗೆ ಅನುಕೂಲತೆಗಳ ದೃಷ್ಟಿಯಿಂದ ಮೂಲಭೂತ ಸೌಕರ್ಯಗಳನ್ನು ಹೊಂದಿವೆಯೆ ; ಹಾಗಿದ್ದಲ್ಲಿ, ಪ್ರಸ್ತುತ ರಾಜ್ಯವು ಪ್ರವಾಸೋದ್ಯಮ ಕ್ಷೇತ್ರದಲ್ಲಿ ದೇಶದಲ್ಲಿ ಎಷ್ಟನೇ ಸ್ಥಾನದಲ್ಲಿದೆ ;

(ಇ) ಪ್ರವಾಸಿ ಚುಟುವಟಿಕೆಗಳಿಂದ ಪರೋಕ್ಷವಾಗಿ ಈ ಕ್ಷೇತ್ರದಲ್ಲಿ ಇಂದಿನ ಉದ್ಯೋಗ ಸೃಷ್ಟಿಯ ಶೇಕಡ ಪ್ರಮಾಣ ಎಷ್ಟು ;

(ಈ) ರಾಜ್ಯದ ಜಿಡಿಪಿಗೆ ಪ್ರವಾಸೋದ್ಯಮ ಇಲಾಖೆಯು ನೀಡುತ್ತಿರುವ ಕೊಡುಗೆ ಎಷ್ಟು ; ಇದನ್ನು ಉತ್ತಮಗೊಳಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳಾವುವು ;

(ಉ) ಪ್ರವಾಸಿಗರ ಸಂಖ್ಯೆ ಅಧಿಕವಾಗಲು ಮತ್ತು ಇದನ್ನು ಒಂದು ಉದ್ಯಮವನ್ನಾಗಿ ಬೆಳೆಸಲು ಇಲಾಖೆಯ ಮುಂದಿರುವ ಸವಾಲುಗಳೇನು ; ಇದಕ್ಕೆ ಪ್ರವಾಸೋದ್ಯಮ ನೀತಿಯಲ್ಲಿ ಕಂಡುಕೊಳ್ಳಲಾದ ಮಾರ್ಗೋಪಾಯಗಳಾವುವು ?

## ನೆರೆ ಪೀಡಿತ ಜಿಲ್ಲೆಗಳಲ್ಲಿ NREGA ಯೋಜನೆಯ ಕಾಮಗಾರಿಗಳ ಅನುಷ್ಠಾನದಲ್ಲಿನ ತೊಡಕುಗಳ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೭೫ (೧೫೯೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) NREGA ಯೋಜನೆಯಡಿ ಕೈಗೊಳ್ಳಲಾಗುವ ಕಾಮಗಾರಿಗಳಲ್ಲಿ ಮಾನವ ಕೂಲಿ ಮತ್ತು ಸಾಮಗ್ರಿ ವೆಚ್ಚದ ಅನುಪಾತದ ಪ್ರಮಾಣವೆಷ್ಟು ;

(ಆ) ರಾಜ್ಯದಲ್ಲಿ ೨೦೧೯–೨೦ ನೇ ಸಾಲಿಗೆ ಕೂಲಿ ಮತ್ತು ಸಾಮಗ್ರಿ ವೆಚ್ಚದ ಅನುಪಾತವನ್ನು ಕಾಪಾಡಿಕೊಂಡು ಕಾಮಗಾರಿಗಳನ್ನು ನಿರ್ವಹಿಸಿದ ಜಿಲ್ಲೆಗಳು ಹಾಗೂ ಅನುಪಾತವನ್ನು ಮೀರಿದ ಜಿಲ್ಲೆಗಳು ಯಾವುವು ; (ಅಂಕಿಅಂಶಗಳ ಸಮೇತ ವಿವರವನ್ನು ನೀಡುವುದು)

(ಇ) ಮಾನವ ಕೂಲಿ ಮತ್ತು ಸಾಮಗ್ರಿ ವೆಚ್ಚದ ಅನುಪಾತದಲ್ಲಿ ವ್ಯತ್ಯಾಸಗಳುಂಟಾದಲ್ಲಿ ಸಾಮಗ್ರಿ ವೆಚ್ಚವನ್ನು ಪಾವತಿಸಲು ಯೋಜನೆಯಡಿ ಅವಕಾಶಗಳಿದೆಯೇ ; ಇಲ್ಲವಾದಲ್ಲಿ, ಅದನ್ನು ಹೇಗೆ ಸರಿಪಡಿಸಲಾಗುತ್ತದೆ ;

(ಈ) ಈ ಯೋಜನೆಯಡಿ ಹೆಚ್ಚು ಮಾನವ ಕೂಲಿಯನ್ನು ಬಯಸುವ ಪ್ರಮುಖವಾದ ಕಾಮಗಾರಿಗಳು ಯಾವುವು ;



(ಉ) ನೆರೆ ಪೀಡಿತ ಜಿಲ್ಲೆಗಳಲ್ಲಿ ಹೆಚ್ಚು ಮಾನವ ಕೂಲಿಯನ್ನು ಬಯಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂಬ ಕೂಗು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೇ, ನೆರೆ ಪೀಡಿತ ಪ್ರದೇಶಗಳಲ್ಲಿ ಆಸ್ತಿಗಳ ದುರಸ್ಥಿಗೆ ಸರ್ಕಾರದ ಮುಂದಿರುವ ಮಾರ್ಗೋಪಾಯಗಳಾವುವು ?

## ತುಮಕೂರು ಜಿಲ್ಲೆಯಲ್ಲಿರುವ ರಮಣೀಯ ಹಾಗೂ ಐತಿಹಾಸಿಕ ಪ್ರವಾಸಿ ತಾಣಗಳನ್ನು ಪ್ರವಾಸಿಗರ ಸರ್ಕ್ಯೂಟ್‌ನಲ್ಲಿ ಸೇರಿಸುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೩೭೬ (೧೬೨೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಬೆಂಗಳೂರು ಹತ್ತಿರದಲ್ಲಿದ್ದು, ಜಿಲ್ಲೆಯಾದ್ಯಂತ ರಮಣೀಯು ಮತ್ತು ಪ್ರವಾಸಿ ಸ್ಥಳಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯ ಸರ್ಕಾರ ಜಿಲ್ಲಾಡಳಿತದಿಂದ ಮತ್ತು ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಲಾದ ರಮಣೀಯ ಮತ್ತು ಐತಿಹಾಸಿಕ ಪ್ರವಾಸಿ ತಾಣಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಹೀಗೆ ಗುರುತಿಸಿರುವ ಪ್ರವಾಸಿ ತಾಣಗಳಲ್ಲಿ ಕೇಂದ್ರ ರಾಜ್ಯ ಸರ್ಕಾರದ ಯೋಜನೆಯಡಿಯಲ್ಲಿ ಯಾತ್ರಿಕರಿಗೆ ಕಲ್ಪಿಸಿರುವ ಸೌಲಭ್ಯಗಳು ಯಾವುವು ; (ವಿವರ ನೀಡುವುದು)

(ಈ) ಜಿಲ್ಲೆಯ ಸುಪ್ರಸಿದ್ಧ ಪ್ರವಾಸಿ ತಾಣಗಳಾದ ದೇವರಾಯನದುರ್ಗ, ನಾಮದ ಚಿಲುಮೆ, ಸಿದ್ದಾರೂಢರ ಬೆಟ್ಟ, ಕೈದಾಳದಲ್ಲಿರುವ ಅಮರ ಶಿಲ್ಪಿ ಜಕಣಾಚಾರಿ ಅವರಿಂದ ಕೆತ್ತಲ್ಪಟ್ಟ ವೀರನಾರಾಯಣ ದೇವಸ್ಥಾನ, ನಂದಿಹಳ್ಳಿ ಸಮೀಪ ಇರುವ ಜೈನ ಬಸದಿಗಳು, ತ್ರಿವಿಧ ದಾಸೋಹಕ್ಕೆ ಹೆಸರಾದ ಸುಪ್ರಸಿದ್ಧ ಸ್ಥಳವಾದ ಸಿದ್ಧಗಂಗಾ ಮಠ, ಮಧುಗಿರಿಯ ಪ್ರಸಿದ್ಧವಾದ ಏಕ ಶೀಲಾ ಬೆಟ್ಟ ಮತ್ತು ಕೋಟೆ, ಶಿರಾ ಪಟ್ಟಣದಲ್ಲಿರುವ ಐತಿಹಾಸಿಕ ಕೋಟೆ ಒಳಗೊಂಡಂತೆ, ಜಿಲ್ಲೆಯ ಸುತ್ತಲೂ ಇರುವ ಸುಪ್ರಸಿದ್ಧ ಸ್ಥಳಗಳಾದ ಶಿವನಗಂಗೆ ಬೆಟ್ಟ ಯಡಿಯೂರು ಸಿದ್ಧಲಿಂಗೇಶ್ವರ ದೇವಸ್ಥಾನ ಮತ್ತು ಮಾರ್ಕೋನಳ್ಳಿ ಡ್ಯಾಂ ಸೇರಿದಂತೆ ಒಂದು ಪ್ರವಾಸಿ ಸರ್ಕ್ಯೂಟ್ (Tourist Circuit) ಎಂದು ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಿ, ಅಭಿವೃದ್ಧಿಪಡಿಸಲು ಒಂದು ನೀಲಿ ನಕ್ಷೆಯನ್ನು ರಚಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ ;

(ಉ) ಇಲ್ಲದಿದ್ದಲ್ಲಿ, ಕಾರಣಗಳೇನು ; ಮತ್ತು ಈ ನೀಲಿ ನಕ್ಷೆಯನ್ನು ತಯಾರಿಸಲು ಸರ್ಕಾರ ಮುಂದಾದರೂ ಕ್ರಮ ವಹಿಸುವುದೇ ? (ವಿವರ ನೀಡುವುದು)

## ಅಲ್ಪಸಂಖ್ಯಾತರ ಉನ್ನತಿಗಾಗಿ ಯೋಜನೆ ರೂಪಿಸುವ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೩೭೭ (೧೬೨೫) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಲ್ಪಸಂಖ್ಯಾತರ ಉನ್ನತಿಗಾಗಿ ಹಾಗೂ ಅವರ ಜೀವನ ಮಟ್ಟವನ್ನು ಸುಧಾರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೈಗೊಂಡ ಯೋಜನೆಯ ವಿವರಗಳೇನು ; (ಪೂರ್ಣ ವಿವರ ನೀಡುವುದು)

(ಆ) ಮೇಲ್ಕಂಡ ಅವಧಿಯಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ಪೂರ್ಣ ಮಾಹಿತಿ ನೀಡುವುದು ;

(ಇ) ವಿವಿಧ ಯೋಜನೆಗಳ ಅಡಿಯಲ್ಲಿ ಎಷ್ಟು ಅಲ್ಪಸಂಖ್ಯಾತರಿಗೆ ಅನುದಾನವನ್ನು ಹಂಚಿಕೆ ಮಾಡಲಾಗಿದೆ ಮತ್ತು ಈ ಯೋಜನೆಗಳ ಅನುಷ್ಠಾನದಿಂದ ಎಷ್ಟು ಫಲಾನುಭವಿಗಳಿಗೆ ಅನುಕೂಲವಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಅಲ್ಪಸಂಖ್ಯಾತರಿಗೆ ಅವರ ಜನಸಂಖ್ಯೆ ಆಧಾರದ ಮೇಲೆ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಎಷ್ಟರಮಟ್ಟಿಗೆ ಹೆಚ್ಚಿಸುವ ಸಾಧ್ಯತೆಯಿದೆ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಾರಿಗೆ ತಂದಿರುವ ಪ್ರಮುಖ ಯೋಜನೆಗಳ ಧನ ಸಹಾಯದಿಂದ ಅಲ್ಪಸಂಖ್ಯಾತರ ಸಮುದಾಯಗಳ ಜೀವನ ಮಟ್ಟದಲ್ಲಿ ತರಲಾದ ಸುಧಾರಣೆಯ ತುಲನಾತ್ಮಕ ಅಧ್ಯಯನವನ್ನು ಕೇಂದ್ರ ಅಥವಾ ರಾಜ್ಯ ಸರ್ಕಾರವಾಗಲಿ ನಡೆಸಿದೆಯೇ ? (ಪೂರ್ಣ ವಿವರ ನೀಡುವುದು)

## ಹೊಸ ಮೋಟಾರು ವಾಹನ ಕಾಯ್ದೆ, ೨೦೧೯

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೩೭೮ (೧೬೨೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸ ಮೋಟಾರು ವಾಹನ ಕಾಯ್ದೆ, ೨೦೧೯ರ ಅನ್ವಯ ವಿಧಿಸಲಾಗುತ್ತಿರುವ ಹೆಚ್ಚಿನ ಫೈನ್/ಪೆನಾಲ್ಟಿಯಿಂದ, ಸಂಚಾರ ನಿಯಮಗಳ ಉಲ್ಲಂಘನೆಯ ಪ್ರಕರಣಗಳು ಕಡಿಮೆ ಆಗಿರುತ್ತವೆಯೇ ;

(ಆ) ಈ ಕಾಯ್ದೆಯ ನಿಬಂಧನೆಗಳು ಅನುಷ್ಠಾನವಾಗಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ಕಾಯ್ದೆಯ ಪ್ರಮುಖ ಅಂಶಗಳನ್ನು ಜಾರಿಗೊಳಿಸಿ, ನಿಯಮಗಳನ್ನು ಅನುಸರಣೆಗೊಳಿಸುವ ಹಂತದಲ್ಲಿ ಪೊಲೀಸ್ ಇಲಾಖೆಯಿಂದ ಮತ್ತು ಸಾರಿಗೆ ಇಲಾಖೆಯಿಂದ ನಡೆಯಬಹುದಾದ ಅಕ್ರಮಗಳು/ಭ್ರಷ್ಟಾಚಾರಗಳನ್ನು ತಡೆಯಲು ಸರ್ಕಾರ ರೂಪಿಸಿರುವ ಕಾರ್ಯವಿಧಾನಗಳೇನು ?

## ಬೆಂಗಳೂರು ನಗರದಲ್ಲಿ ಎಲೆಕ್ಟ್ರಾನಿಕ್ ಬಸ್ಸುಗಳ ಸಂಚಾರದ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೩೭೯ (೧೬೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ಮಾಲಿನ್ಯ ತಡೆಗಟ್ಟುವ ಸಲುವಾಗಿ ಎಲೆಕ್ಟ್ರಾನಿಕ್ ಬಸ್‌ಗಳನ್ನು ರಸ್ತೆಗಿಳಿಸಲು ಸರ್ಕಾರ ನಿರ್ಧಾರ ಕೈಗೊಂಡಿದೆಯೇ ; ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;



(ಆ) ಕೇಂದ್ರ ಸರ್ಕಾರದ ಭಾರಿ ಕೈಗಾರಿಕಾ ಸಚಿವಾಲಯವು ೨ನೇ ಹಂತದ ಫೇಮ್ ಇಂಡಿಯಾ ಯೋಜನೆಯಡಿ ಎಷ್ಟು ಎಲೆಕ್ಟ್ರಾನಿಕ್ ಬಸ್‌ಗಳನ್ನು (ನಾಲ್ಕು ಸಾರಿಗೆ ನಿಯಮಗಳು ಸೇರಿದಂತೆ) ನೀಡಲು ನಿರ್ಧರಿಸಿದೆ ;

(ಇ) ಪ್ರತಿ ಬಸ್ಸಿಗೆ ಭಾರತ ಸರ್ಕಾರ ನೀಡುವ ಸಹಾಯ ಧನ ಮೊತ್ತವೆಷ್ಟು ; (ವಿವರ ನೀಡುವುದು)

(ಈ) ಸಹಾಯ ಧನವನ್ನು ನಿಗಧಿತ ಅವಧಿಯೊಳಗೆ ರಾಜ್ಯ ಸರ್ಕಾರ ಬಳಸಿಕೊಳ್ಳದೆ ಇರುವುದರಿಂದ ಈ ಸಹಾಯ ಧನ ರದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಬಗ್ಗೆ ವಿಳಂಬ ಧೋರಣೆ ತೋರಿದ ಅಧಿಕಾರಿಗಳ ಬಗ್ಗೆ ಸರ್ಕಾರ ಇದುವರೆಗೆ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಊ) ಈ ಎಲೆಕ್ಟ್ರಾನಿಕ್ ಬಸ್‌ಗಳನ್ನು ಮತ್ತೆ ಖರೀದಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಕಳೆದೆರಡು ವರ್ಷ ಸಂಭವಿಸಿದ ಪ್ರಕೃತಿ ವಿಕೋಪದ ನಂತರದಲ್ಲಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೮೦ (೧೬೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದ ಮೊದಲು ಇದ್ದ ಎಲ್ಲಾ ಮಾರ್ಗಗಳಲ್ಲಿ ಬಸ್ ಸಂಚಾರ ವ್ಯವಸ್ಥೆ ಪುನರ್ ಸ್ಥಾಪಿಸಲಾಗಿದೆಯೇ ;

(ಆ) ೨ ಬಾರಿ ಸಂಭವಿಸಿದ ಪ್ರಕೃತಿ ವಿಕೋಪದ ನಂತರದಲ್ಲಿ ಯಾವುದಾದರೂ ಮಾರ್ಗದ ಸೇವೆಯನ್ನು ರದ್ದುಗೊಳಿಸಿರುವ ಅಥವಾ ಕಡಿತಗೊಳಿಸಿರುವ ಪ್ರಕರಣಗಳಿವೆಯೇ ;

(ಇ) ಜಿಲ್ಲೆಯಲ್ಲಿ ಇನ್ನೂ ಬಸ್ ಸಂಚಾರ ಸೌಲಭ್ಯದಿಂದ ವಂಚಿತವಾಗಿರುವ ಗ್ರಾಮಗಳಿವೆಯೇ ; ಇದ್ದಲ್ಲಿ, ಪಟ್ಟಿ ನೀಡುವುದು ಹಾಗೂ ಈ ಗ್ರಾಮಗಳಿಗೆ ಇದುವರೆವಿಗೂ ಸೌಲಭ್ಯ ಕಲ್ಪಿಸದೇ ಇರಲು ಕಾರಣಗಳೇನು ?

## ಬೀದರ್ ಜಿಲ್ಲೆಯ ಬೀದರ್ ಗ್ರಾಮಾಂತರ ಪ್ರದೇಶದಲ್ಲಿ ಕುಡಿಯುವ ನೀರಿನ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೧ (೧೬೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಜನರ ಹಾಗೂ ಜಾನುವಾರುಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕುಡಿಯುವ ನೀರನ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕುಡಿಯುವ ನೀರನ್ನು ಒದಗಿಸಲು ಸರ್ಕಾರ ನೀಡಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)



## ಬೀದರ್ ನಗರದ ನೆಹರು ಕ್ರೀಡಾಂಗಣದ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೨ (೧೬೩೪) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರದ ನೆಹರೂ ಕ್ರೀಡಾಂಗಣದ ನಿರ್ಮಾಣಕ್ಕೆ ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಆ) ಕ್ರೀಡಾಂಗಣದ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ಕಾಮಗಾರಿ ಕಳಪೆಯಾಗಿರುವ ಬಗ್ಗೆ ದೂರಗಳು ಕೇಳಿ ಬಂದಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯತ್ ಚುನಾಯಿತ ಜನಪ್ರತಿನಿಧಿಗಳ ಮಾಸಿಕ ಗೌರವಧನ ಹೆಚ್ಚಿಸುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೩ (೧೫೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದ ಗ್ರಾಮ ಪಂಚಾಯಿತಿಗಳ ಚುನಾಯಿತ ಜನಪ್ರತಿನಿಧಿಗಳಿಗೆ ಮಾಸಿಕ ಗೌರವಧನ ಕಡಿಮೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮಾಸಿಕ ಗೌರವಧನ ಹೆಚ್ಚಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ಗ್ರಾಮ ಪಂಚಾಯತ್‌ಗಳ ತುರ್ತು ಕಾಮಗಾರಿ/ನಿರ್ವಹಣೆಗಾಗಿ ವಿಶೇಷ ಅನುದಾನ ನೀಡುವ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮೪ (೧೭೯೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತಿಗಳ ಗ್ರಾಮ ಸಭೆಗಳಲ್ಲಿ ತುರ್ತು ಸಂದರ್ಭಗಳಲ್ಲಿ ಮೂಲಸೌಕರ್ಯದಂತಹ (ರಸ್ತೆ, ಚರಂಡಿ, ಕುಡಿಯುವ ನೀರು ಪೂರೈಕೆಗಾಗಿ ಕೊಳವೆ ಬಾವಿ ಕೊರೆಯುವುದು ಇತ್ಯಾದಿ) ಕಾಮಗಾರಿ ಕೈಗೊಳ್ಳಲು ಅನುದಾನ ಕೊರತೆಯಿಂದಾಗಿ ಗ್ರಾಮ ಸಭೆಯಲ್ಲಿ ಯಾವುದೇ ನಿರ್ಣಯ ಕೈಗೊಳ್ಳಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಆ) ಪ್ರತಿ ಗ್ರಾಮ ಪಂಚಾಯತಿಗೆ ತುರ್ತು ಸಂದರ್ಭಗಳಲ್ಲಿ ಮೂಲ ಸೌಕರ್ಯದಂತಹ ಕಾಮಗಾರಿಗಳಿಗಾಗಿ ವಿಶೇಷ ಅನುದಾನ ನಿಗಧಿಪಡಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

## ಕ್ರೀಡಾ ಪಟುಗಳಿಗೆ ಸೌಲಭ್ಯ ಒದಗಿಸುವ ಕುರಿತು

**ಶ್ರೀ ಆಯನೂರು ಮಂಜುನಾಥ (ಪದವೀಧರರ ಕ್ಷೇತ್ರ) :–**

೧೩೮೫ (೧೬೦೭) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಅಂತರ್‌ರಾಷ್ಟ್ರೀಯ ಕ್ರೀಡೆಗಳಲ್ಲಿ ಚಿನ್ನವನ್ನು ಗೆದ್ದು ಭಾರತ ದೇಶಕ್ಕೆ ಗೌರವವನ್ನು ತಂದಿರುವ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದಿಂದ ಲಭಿಸುವ ಸೌಲಭ್ಯಗಳೇನು ; ರಾಜ್ಯ ಸರ್ಕಾರದಿಂದ ಇವರಿಗೆ ಎಷ್ಟು ನಗದು ಬಹುಮಾನ ನೀಡಲಾಗುತ್ತಿದೆ ;

(ಆ) ಈ ಕ್ರೀಡಾಪಟುಗಳಿಗೆ ವಿದ್ಯಾರ್ಹತೆಗೆ ತಕ್ಕ ಉದ್ಯೋಗ ಕಲ್ಪಿಸಿಕೊಡುವ ಯೋಜನೆ ಇದೆಯೇ ; ಇಲ್ಲದಿದ್ದಲ್ಲಿ, ಇಂತಹ ಕ್ರೀಡಾಪಟುಗಳಿಗೆ ತಕ್ಷಣ ಉದ್ಯೋಗ ಕಲ್ಪಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಇವರಿಂದ ಕೋರಿಕೆ ಬಂದಲ್ಲಿ ವಸತಿ ಹೀನರಿಗೆ ಬೆಂಗಳೂರಿನಲ್ಲಿ ಬಿಡಿಎ ನಿವೇಶನ ಮಂಜೂರು ಮಾಡಲಾಗುವುದೇ ; ಇಂತಹ ಕ್ರೀಡಾಪಟುಗಳಿಗೆ ವಿವಿಧ ಕ್ರೀಡಾ ಅಕಾಡೆಮಿಗೆ ತರಬೇತಿದಾರರನ್ನಾಗಿ ನೇಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಈ) ರಾಜ್ಯದ ಕ್ರೀಡಾಪಟುಗಳು ಅಂತರ್‌ರಾಜ್ಯ ಮತ್ತು ಅಂತರ್ ರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಲು ಅನುವಾಗುವಂತೆ ಅವರ ಎಲ್ಲ ಖರ್ಚು ವೆಚ್ಚಗಳನ್ನು ಸರ್ಕಾರ ಭರಿಸಲು ಮುಂದಾಗುವುದೇ ; ಈಗಾಗಲೇ ಯಾವ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ;

(ಉ) ಗಾಲ್ಫ್ ಕ್ಲಬ್, ಬ್ಯಾಡ್ಮಿಂಟನ್ ಕ್ಲಬ್, ಇನ್ನಿತರ ಕ್ಲಬ್ ರೀತ್ಯಾ ರಾಜ್ಯದಲ್ಲಿ ಚೆಸ್ ಕ್ಲಬ್ ಆರಂಭಿಸುವ ಯೋಚನೆ ಸರ್ಕಾರದ ಮುಂದಿದೆಯೇ ;

(ಊ) ಅಂಗವಿಕಲರ ಚೆಸ್ ಕ್ರೀಡೆಯಲ್ಲಿ ಏಸಿಯನ್ ಪ್ಯಾರಾಗೇಮ್ ಚಿನ್ನದ ಪದಕ ಪಡೆದ ಶಿವಮೊಗ್ಗದ ಕ್ರೀಡಾಪಟುಗೆ ಸರ್ಕಾರ ಇದುವರೆಗೆ ನೀಡಿರುವ ಸೌಲಭ್ಯಗಳೇನು ; ಇವರ ಬೇಡಿಕೆಗಳೇನು ? (ವಿವರ ನೀಡುವುದು)

## ಮಹಿಳಾ ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯಲ್ಲಿ ಉಂಟಾದ ಗೊಂದಲಗಳ ಕುರಿತು

**ಡಾ: ಚಂದ್ರಶೇಖರ್ ಬಿ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೩೮೬ (೧೬೦೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಎಸ್.ಸಿ. ಯಿಂದ ನೇಮಕಗೊಂಡ ಮಹಿಳಾ ಮೇಲ್ವಿಚಾರಕಿಯರ ಸ್ಥಳ ನಿಯುಕ್ತಿಯಲ್ಲಿ ಗೊಂದಲಗಳು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗೊಂದಲಗಳನ್ನು ಸರಿಪಡಿಸಲು ಕೈಗೊಂಡ ಕ್ರಮಗಳೇನು ;

(ಇ) ಸದರಿ ಸ್ಥಳ ನಿಯುಕ್ತಿಗಳು ನಿಯಮಗಳ ಪ್ರಕಾರ ನಡೆದಿದೆಯೇ ; ಯಾವ ರೀತಿಯಲ್ಲಿ ಸ್ಥಳ ನಿಯುಕ್ತಿಗಳನ್ನು ಮಾಡಲಾಗಿದೆ ; (ವಿವರ ನೀಡುವುದು)

(ಈ) ಎಲ್ಲಾ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಯನ್ನು ಕೌನ್ಸಿಲಿಂಗ್ ಮುಖಾಂತರ ಏಕಕಾಲದಲ್ಲಿ ಮಾಡಲಾಗಿದೆಯೇ ;

(ಉ) ಕೌನ್ಸಿಲಿಂಗ್‌ಗೆ ಹಾಜರಾಗಲು ಎಲ್ಲಾ ಅಭ್ಯರ್ಥಿಗಳಿಗೆ ಸಾಕಷ್ಟು ಸಮಯಾವಕಾಶ ನೀಡಲಾಗಿತ್ತೇ ; ಸಮಯಾವಕಾಶ ನೀಡಲಾಗಿದ್ದಲ್ಲಿ ಎಷ್ಟು ಸಮಯಾವಕಾಶ ನೀಡಲಾಗಿತ್ತು ; (ವಿವರ ನೀಡುವುದು)

(ಊ) ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಅನುಸರಿಸುವ ಮಾನದಂಡಗಳು ಮತ್ತು ನೀತಿ ನಿಯಮಗಳು ಏನಾದರೂ ಇವೆಯೇ ; ಇದ್ದಲ್ಲಿ, ಅವುಗಳ ಪ್ರತಿ ಒದಗಿಸುವುದು ;



(ಋ) ಕೌನ್ಸಿಲಿಂಗ್ ಮಾಡುವ ಮೊದಲು ಖಾಲಿ ಹುದ್ದೆಗಳ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ ; ಪ್ರಕಟಿಸಿದ್ದಲ್ಲಿ ಯಾವಾಗ ಪ್ರಕಟಿಸಲಾಗಿತ್ತು ;

(ಎ) ಆಗಿರುವ ಗೊಂದಲವನ್ನು ಮತ್ತು ಅನ್ಯಾಯವನ್ನು ಸರಿಪಡಿಸಲು ಇನ್ನೊಮ್ಮೆ ಎಲ್ಲಾ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ ; ಈ ಕುರಿತು ಸರ್ಕಾರ ನಿಲುವು ಏನು ?

## ಪಿ.ಡಿ.ಓ. ಸಹಾಯಕ ನಿರ್ದೇಶಕರು ಮತ್ತು ಇ.ಓ.ಗಳಿಗೆ ಸಂಬಂಧಪಟ್ಟಂತೆ ನ್ಯಾಯಾಲಯಗಳಲ್ಲಿ ಇರುವ ಪ್ರಕರಣಗಳ ಕುರಿತು

**ಡಾ: ಚಂದ್ರಶೇಖರ್ ಬಿ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೩೮೭ (೧೬೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸಹಾಯಕ ನಿರ್ದೇಶಕರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳ ಜ್ಯೇಷ್ಠತಾ ಪಟ್ಟಿ ಮತ್ತು ಪದೋನ್ನತಿಗೆ ಸಂಬಂಧಪಟ್ಟಂತೆ ವಿವಿಧ ನ್ಯಾಯಾಲಯಗಳಲ್ಲಿ ಯಾವುದಾದರೂ ಪ್ರಕರಣಗಳು ದಾಖಲಾಗಿದೆಯೇ ;

(ಆ) ಇದ್ದಲ್ಲಿ, ಎಷ್ಟು ಪ್ರಕರಣಗಳು ಮುಕ್ತಾಯಗೊಂಡಿದೆ ಮತ್ತು ಎಷ್ಟು ಪ್ರಕರಣಗಳು ನ್ಯಾಯಾಲಯಗಳಲ್ಲಿ ಬಾಕಿ ಇದೆ ; ಪ್ರಕರಣಗಳ ಸಂಖ್ಯೆಗಳ ಸಹಿತ ವಿವರ ನೀಡುವುದು ?

## ಪ್ರವಾಸೋದ್ಯಮ ಇಲಾಖೆಯ ನಿಗಮಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೩೮೮ (೧೬೬೨) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು / ಕಂಪನಿಗಳು ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ ; ಅವು ಯಾವುವು ; (ಇಲಾಖಾವಾರು, ಕೇಂದ್ರ ಕಛೇರಿ ವಿಳಾಸ, ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ / ಪ್ರಾಯೋಜಿತ/ಇತರೆ ಯೋಜನೆಗಳಾವುವು; ಸದರಿ ಯೋಜನೆಗಳಿಗೆ ೨೦೧೯–೨೦ ನೇ ಸಾಲಿನಲ್ಲಿ ಎಷ್ಟು ಹಣ ಬಂದಿದೆ ; ಇನ್ನೂ ಎಷ್ಟು ಹಣ ಬರಬೇಕಿದೆ ; (ಯೋಜನಾವಾರು ಮಾಹಿತಿ ನೀಡುವುದು)

(ಇ) ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ ಇಟ್ಟಿವೆ ; ಎಫ್.ಡಿ ಇಡಲು ಕಾರಣಗಳೇನು ; ಈ ಹಣವನ್ನು ಯಾವಾಗ ಉಪಯೋಗಿಸಲಾಗುವುದು ; ಸಂಸ್ಥೆವಾರು ಮಾಹಿತಿ ನೀಡುವುದು ?



## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿಗಮಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೩೮೯ (೧೬೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು / ಕಂಪನಿಗಳು ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ ; ಅವು ಯಾವುವು ; (ಇಲಾಖಾವಾರು, ಕೇಂದ್ರ ಕಛೇರಿ ವಿಳಾಸ, ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ / ಪ್ರಾಯೋಜಿತ / ಇತರೆ ಯೋಜನೆಗಳಾವುವು ; ಸದರಿ ಯೋಜನೆಗಳಿಗೆ ೨೦೧೯–೨೦ ನೇ ಸಾಲಿನಲ್ಲಿ ಎಷ್ಟು ಹಣ ಬಂದಿದೆ ; ಇನ್ನೂ ಎಷ್ಟು ಹಣ ಬರಬೇಕಿದೆ ; (ಯೋಜನಾವಾರು ಮಾಹಿತಿ ನೀಡುವುದು)

(ಇ) ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ ಇಟ್ಟಿವೆ ; ಎಫ್.ಡಿ ಇಡಲು ಕಾರಣಗಳೇನು ; ಈ ಹಣವನ್ನು ಯಾವಾಗ ಉಪಯೋಗಿಸಲಾಗುವುದು ; ಸಂಸ್ಥೆವಾರು ಮಾಹಿತಿ ನೀಡುವುದು ?

## ಪಶುಸಂಗೋಪನೆ ಇಲಾಖೆಯ ನಿಗಮಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೦ (೧೬೫೯) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನೆ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳ / ಕಂಪನಿಗಳು ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ ; ಅವು ಯಾವುವು ; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ / ಪ್ರಾಯೋಜಿತ / ಇತರೆ ಯೋಜನೆಗಳಾವುವು; ಸದರಿ ಯೋಜನೆಗಳಿಗೆ ೨೦೧೯–೨೦ ನೇ ಸಾಲಿನಲ್ಲಿ ಎಷ್ಟು ಹಣ ಬಂದಿದೆ ; ಇನ್ನೂ ಎಷ್ಟು ಹಣ ಬರಬೇಕಿದೆ ; (ಯೋಜನಾವಾರು ಮಾಹಿತಿ ನೀಡುವುದು)

(ಇ) ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ ಇಟ್ಟಿವೆ ; ಎಫ್.ಡಿ ಇಡಲು ಕಾರಣಗಳೇನು ; ಈ ಹಣವನ್ನು ಯಾವಾಗ ಉಪಯೋಗಿಸಲಾಗುವುದು ; ಸಂಸ್ಥೆವಾರು ಮಾಹಿತಿ ನೀಡುವುದು ?

## ರಾಜ್ಯದಲ್ಲಿರುವ ಗ್ರಾಮಪಂಚಾಯತ್‌ಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೧ (೧೬೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳ ಹೆಸರಿನೊಂದಿಗೆ ತಾಲ್ಲೂಕುವಾರು ಹಾಗೂ ಹೋಬಳಿವಾರು ಮಾಹಿತಿ ನೀಡುವುದು ;

(ಇ) ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳು ಯಾವುವು ; (ಪೂರ್ಣವಾಗಿ ಹೋಬಳಿವಾರು / ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಈ) ಗ್ರಾಮ ಪಂಚಾಯಿತಿಗಳಲ್ಲಿ ಎಷ್ಟು ವಿಧ ; ಅವು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಉ) ಗುಬ್ಬಿ ತಾಲ್ಲೂಕಿನಲ್ಲಿ ಎಷ್ಟು ಗ್ರೇಡ್–೧, ಗ್ರೇಡ್–೨ ಗ್ರಾಮ ಪಂಚಾಯಿತಿಗಳಿವೆ ? (ಮಾಹಿತಿ ನೀಡುವುದು)

## ಗ್ರಾಮಪಂಚಾಯತ್‌ಗಳ ಕಂದಾಯ ನಿವೇಶನಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೪೨ (೧೬೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬರುವ ನಿವೇಶನಗಳ ಪೈಕಿ ಕ್ರಮಬದ್ಧ ನಿವೇಶನಗಳು ಹಾಗೂ ಕ್ರಮಬದ್ಧವಲ್ಲದ ನಿವೇಶನಗಳು ಅಂದರೆ ಏನು ; (ವಿವರವಾದ ಮಾಹಿತಿ ನೀಡುವುದು)

(ಆ) ಕ್ರಮಬದ್ಧವಾದ ಮತ್ತು ಕ್ರಮಬದ್ಧವಲ್ಲದ ನಿವೇಶನಗಳಿಗೆ ಪಂಚಾಯಿತಿ ವತಿಯಿಂದ ನೀಡುತ್ತಿರುವ ದಾಖಲೆ ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಇ) ಕಂದಾಯ ನಿವೇಶನ ಅಂದರೆ ಏನು ; ಇವುಗಳಿಗೆ ಪಂಚಾಯಿತಿ ವತಿಯಿಂದ ನೀಡುತ್ತಿರುವ ದಾಖಲೆ ಯಾವುದು ; ಇವುಗಳ ನೋಂದಣಿಯನ್ನು ಸ್ಥಗಿತಗೊಳಿಸಿರುವುದು ನಿಜವೇ ;

(ಈ) ಸ್ಥಗಿತಗೊಳಿಸಿರುವ ಕಂದಾಯ ನಿವೇಶನಗಳ ನೋಂದಣಿಯನ್ನು ಯಾವಾಗ ಪ್ರಾರಂಭಿಸಲಾಗುವುದು ; ಇದಕ್ಕೆ ಸಂಬಂಧಿಸಿದಂತೆ ಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು ?

## ಬಹುಗ್ರಾಮಗಳ ಕುಡಿಯುವ ನೀರಿನ ಯೋಜನೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯೩ (೧೫೭೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಗೆ ಕಳೆದ ೫ ವರ್ಷಗಳಲ್ಲಿ ಮಂಜೂರಾಗಿರುವ ಬಹು ಗ್ರಾಮಗಳ ಕುಡಿಯುವ ನೀರಿನ ಯೋಜನೆಗಳು ಎಷ್ಟು; ಆ ಪೈಕಿ ಪೂರ್ಣಗೊಂಡಿರುವ ಕಾಮಗಾರಿಗಳು ಹಾಗೂ ಸ್ಥಗಿತಗೊಂಡಿರುವ ಕಾಮಗಾರಿಗಳು ಎಷ್ಟು; (ತಾಲ್ಲೂಕುವಾರು / ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪೂರ್ಣಗೊಳ್ಳದ ಕಾಮಗಾರಿಗಳನ್ನು ಪೂರ್ತಿಗೊಳಿಸಲು ತೆಗೆದುಕೊಂಡ ಕ್ರಮವೇನು ;

(ಇ) ಬಹುಗ್ರಾಮಗಳ ಕುಡಿಯುವ ನೀರಿನ ನಿರ್ವಹಣೆಗೆ ನಿಗದಿಪಡಿಸಲಾದ ಹಣ ಎಷ್ಟು ? (ಕಳೆದ ಮೂರು ವರ್ಷಗಳ ತಾಲ್ಲೂಕುವಾರು / ಜಿಲ್ಲಾವಾರು ಮಾಹಿತಿ ನೀಡುವುದು)



## ಶುದ್ಧ ನೀರಿನ ಘಟಕವನ್ನು ಸರಿಯಾಗಿ ನಿರ್ವಹಣೆ ಮಾಡದೆ ಇರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯೪ (೧೫೭೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಪ್ರಾರಂಭದಿಂದ ಇದುವರೆವಿಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕೆ ಸರ್ಕಾರ ಇದುವರೆಗೂ ಮಾಡಿರುವ ಖರ್ಚು ಎಷ್ಟು; (ಮಾಹಿತಿ ನೀಡುವುದು)

(ಇ) ಸಾವಿರಾರು ಕೋಟಿ ರೂಪಾಯಿ ಖರ್ಚು ಮಾಡಿ ಶುದ್ಧ ನೀರಿನ ಘಟಕಗಳನ್ನು ನಿರ್ಮಾಣ ಮಾಡಿದಾಗ ಅವುಗಳು ಸರಿಯಾಗಿ ಕಾರ್ಯನಿರ್ವಹಿಸದೇ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಿತವಾಗಿ ನಿರ್ವಹಿಸದಿರುವುದಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ಯಾವ ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಉ) ಶುದ್ಧ ನೀರಿನ ಘಟಕಗಳು ಸ್ಥಾಪನೆಯಾದ ದಿನದಿಂದ ಇದುವರೆಗೂ ಕಾರ್ಯಾರಂಭ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯಾದ್ಯಂತ ಈ ರೀತಿ ಕಾರ್ಯಾರಂಭ ಮಾಡದಿರುವ ಘಟಕಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ಯೋಜನೆಗೆ ಬಂದಿರುವ ಅನುದಾನ ಮಾಹಿತಿ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೧೮೫೫ (೧೫೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ಯೋಜನೆಗಾಗಿ ಕಳೆದ ೩ ವರ್ಷಗಳಲ್ಲಿ ಸರ್ಕಾರದಿಂದ ಬಂದಿರುವ ಅನುದಾನದ ಮೊತ್ತ ಎಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೇಂದ್ರ ಸರ್ಕಾರದಿಂದ ಬಂದ ಅನುದಾನವನ್ನು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಹಂಚಿಕೆ ಮಾಡಲಾಗಿದೆಯೇ ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಾಗಿ ನೀಡುತ್ತಿರುವ ಅನುದಾನವನ್ನು ಕೆಲವು ತಾಲ್ಲೂಕುಗಳಲ್ಲಿ ಸಮರ್ಪಕವಾಗಿ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಿಕಲಚೇತನ ಶಾಲೆಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೬ (೧೬೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ರಾಜ್ಯದಲ್ಲಿ ಒಟ್ಟು ಎಷ್ಟು ವಿಕಲಚೇತನ ಶಾಲೆಗಳಿವೆ ;

(ಆ) ಇದರಲ್ಲಿ ಎಷ್ಟು ಶಾಲೆಗಳನ್ನು ಸರ್ಕಾರ ಹಾಗೂ ಎಷ್ಟು ಶಾಲೆಗಳನ್ನು ಸರ್ಕಾರೇತರ ಸಂಸ್ಥೆಗಳು ನಡೆಸುತ್ತಿವೆ ;

(ಇ) ರಾಜ್ಯದಲ್ಲಿರುವ ಸರ್ಕಾರ ಮತ್ತು ಸರ್ಕಾರೇತರ ಶೀರ್ಷಿಕೆಯಲ್ಲಿ ಇರುವ ಅಂಧ ಮಕ್ಕಳ ಶಾಲೆಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಶಾಲೆಗಳಿಗೆ ಬಿಡುಗಡೆ ಮಾಡಲಾದ ಸಹಾಯ ಧನವೆಷ್ಟು ;

(ಉ) ಸದರಿ ವಿಕಲಚೇತನ ಶಾಲೆಗಳಿಗೆ ಕೊಡುವ ಅನುದಾನವು ಅತೀ ಕಡಿಮೆ ಇದ್ದು, ಸರ್ಕಾರೇತರ ಸಂಸ್ಥೆಗಳೇ ಹೆಚ್ಚಾಗಿ ನಡೆಸುತ್ತಿದ್ದು, ಈ ಸಂಸ್ಥೆಗಳ ಶಕ್ತಿ ಬಲಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ವಿದ್ಯುತ್ ಚಾಲಿತ ಬಸ್ಸುಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬೨ (೧೬೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಡೀಸೆಲ್ ವಾಹನದ ಚಾಲನಾ ವೆಚ್ಚ ಹೆಚ್ಚಾಗುತ್ತಿದ್ದು, ಇಂತಹ ವಾಹನಗಳಿಂದ ಪರಿಸರ ಮಾಲಿನ್ಯ ಉಂಟಾಗುತ್ತಿದ್ದು, ಇವೆರೆಡನ್ನೂ ನಿಯಂತ್ರಣಕ್ಕೆ ತರಲು ಸರ್ಕಾರ ಬದಲಿ ವ್ಯವಸ್ಥೆ ಕುರಿತು ಯೋಜನೆ ಮಾಡಿಕೊಂಡಿದೆಯೇ ;

(ಆ) ಸರ್ಕಾರವು ಸದರಿ ಬಸ್ಸುಗಳನ್ನು ಬದಲಾಯಿಸಿ, ವಿದ್ಯುತ್ ಚಾಲನಾ ಬಸ್ಸುಗಳನ್ನು ಬಳಸಲು ಇಚ್ಛಿಸಿರುವುದು ನಿಜವೇ ;

(ಇ) ವಿದ್ಯುತ್ ಚಾಲಿತ ಬಸ್ಸುಗಳನ್ನು ಯಾವ ಮೂಲದ ಮುಖಾಂತರ ಖರೀದಿ ಮಾಡಲಾಗುವುದು ಹಾಗೂ ಈ ವಿದ್ಯುತ್ ಚಾಲಿತ ಬಸ್ಸಿನ ಪ್ರತಿ ಯುನಿಟ್‌ನ ಬೆಲೆ ಎಷ್ಟು ;

(ಈ) ವಿದ್ಯುತ್ ಚಾಲಿತ ಬಸ್ಸುಗಳಿಗೆ ಪ್ರತಿ ಕಿ.ಮೀಗೆ ಆಗುವ ನಿರ್ವಹಣಾ ವೆಚ್ಚವೆಷ್ಟು ;

(ಉ) ಈ ತರಹದ ಎಷ್ಟು ವಾಹನಗಳನ್ನು ಯಾವಾಗ ಖರೀದಿಸಲು ಸರ್ಕಾರ ಯೋಚಿಸಿದೆ ?

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಹಾಗೂ ವಾಹನಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೩೯೮ (೧೬೫೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ರಸ್ತೆ ಸಾರಿಗೆ ನಿಗಮವು ಸಾರ್ವಜನಿಕರಿಗೆ ಪರಿಣಾಮಕಾರಿ–ಯಾಗಿ ಸೇವೆಯನ್ನು ಒದಗಿಸುವ ಹಿನ್ನಲೆಯಲ್ಲಿ ನಾಲ್ಕು ವಿಭಾಗಗಳನ್ನು ಮಾಡಿದ್ದರೂ ಈವರೆಗೂ ನಿರೀಕ್ಷಿತ ಫಲಿತಾಂಶ ಬಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿವರ ನೀಡುವುದು ;

(ಆ) ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಒಟ್ಟು ಇರುವ ವಾಹನಗಳ ಸಂಖ್ಯೆ ಎಷ್ಟು ; (ವಿಭಾಗವಾರು ವಿವರ ನೀಡುವುದು)

(ಇ) ಈ ವಾಹನಗಳನ್ನು ಖರೀದಿಸಿದ ಎಷ್ಟು ವರ್ಷಗಳ ಅವಧಿಯ ನಂತರ ಸ್ಕ್ರ್ಯಾಪ್ (Scrap) ಮಾಡಲಾಗುವುದು ;



(ಈ) ಸದರಿ ವಾಹನಗಳ ಸಂಚಲನಕ್ಕೆ ಪ್ರತಿ ಕಿ.ಮೀಗೆ ತಗಲುವ ವೆಚ್ಚವೆಷ್ಟು?

## ಬಹಿರ್ದೆಸೆ ವಿಮುಕ್ತ ಯೋಜನೆಯ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೯೯ (೧೬೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ರಾಜ್ಯವನ್ನು ಬಹಿರ್ದೆಸೆ ವಿಮುಕ್ತ ರಾಜ್ಯವನ್ನಾಗಿ ಮಾಡುವ ಯೋಜನೆ ಹಾಕಿಕೊಂಡಿದ್ದು, ಇದನ್ನು ಅನುಷ್ಠಾನಕ್ಕೆ ತರಲಾಗಿದೆಯೇ ;

(ಆ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಅಳವಡಿಸಲಾಗಿದೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ಬಂದ ಹಣವೆಷ್ಟು ;

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮಾಡಲಾದ ಖರ್ಚಿನ ಜಿಲ್ಲಾವಾರು ಮಾಹಿತಿ ಒದಗಿಸುವುದು ?

## ರಾಜ್ಯದ ಪ್ರವಾಸಿ ತಾಣಗಳ ಸಮಸ್ಯೆಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೦ (೧೬೫೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿಗೆ ಸಾಕಷ್ಟು ಅವಕಾಶಗಳಿದ್ದು, ಅದರ ಸದ್ಬಳಕೆ ಇಲ್ಲದೇ ಯಾತ್ರಾರ್ಥಿಗಳು ಹಲವಾರು ಸಮಸ್ಯೆಗಳನ್ನೆದುರಿಸುತ್ತಿದ್ದು. ರಾಜ್ಯದ ಬೊಕ್ಕಸಕ್ಕೂ ಉತ್ಪನ್ನ ಬರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಉತ್ತರ ಕರ್ನಾಟಕದ ಬಹು ಮುಖ್ಯ ಪ್ರವಾಸೀ ತಾಣಗಳಾದ ವಿಜಯಪುರದಲ್ಲಿರುವ ಗೋಲ್‌ಗುಂಬಜ್‌ದಂತಹ ಅದ್ಭುತವಾದ ಪ್ರೇಕ್ಷಣೀಯ ಸ್ಥಳಕ್ಕೆ ಹೊರದೇಶದಿಂದ ಬಂದ ಪ್ರವಾಸಿಗರಿಗೆ ಬೆಂಗಳೂರಿನಿಂದ ಪ್ರಯಾಣ ಬೆಳೆಸಲು ಹಾಗೂ ಉಳಿದುಕೊಳ್ಳಲು ಒಳ್ಳೆಯ ವಸತಿ ಗೃಹಗಳ ಅನಾನುಕೂಲತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಶ್ರೀ ರೇಣುಕಾ ಯಲ್ಲಮ್ಮ ದೇವಾಲಯಕ್ಕೆ ಅಸಂಖ್ಯಾತ ಪ್ರವಾಸಿಗರು ಬರುತ್ತಿದ್ದು, ಮೂಲಭೂತ ಸೌಕರ್ಯಗಳ ಹಾಗೂ ಶುಚಿತ್ವದ ಕೊರತೆಯಿಂದ ಜನಸಾಮಾನ್ಯರು ತೊಂದರೆಗೊಳಗಾಗುತ್ತಿದ್ದು, ಇದರ ಸುಧಾರಣೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಈ) ಬಾಗಲಕೋಟೆ ಜಿಲ್ಲೆಯ ಬಾದಾಮಿ, ಬನಶಂಕರಿ, ಐಹೊಳೆ, ಪಟ್ಟದ ಕಲ್ಲುಗಳಂತಹ ಜಗತ್ಪ್ರಸಿದ್ಧ ಪ್ರವಾಸೀ ತಾಣಗಳಿಗೆ ಹೋಗಿ ಬರಲು ಹಾಗೂ ಉಳಿದುಕೊಳ್ಳಲು ಒಳ್ಳೆ ಸಾರಿಗೆ ಹಾಗೂ ವಾಸ್ತವ್ಯಕ್ಕೆ ಕೊರತೆ ಇರುವುದರಿಂದ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿಯಾಗದೇ ಸರ್ಕಾರಕ್ಕೆ ಆದಾಯವೂ ಕಡಿಮೆಯಾಗಿದ್ದು. ಇದರ ಸುಧಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?



## ರಾಜ್ಯದಲ್ಲಿರುವ ಕ್ರೀಡಾಂಗಣಗಳ ಸಂಖ್ಯೆ

**ಶ್ರೀ ಸಿ. ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦೧ (೧೫೭೮) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕ್ರೀಡಾಂಗಣಗಳ ಸಂಖ್ಯೆ ಎಷ್ಟು ; (ಜಿಲ್ಲೆಗಳವಾರು ಮಾಹಿತಿ ನೀಡುವುದು)

(ಆ) ಈ ಕ್ರೀಡಾಂಗಣಗಳನ್ನು ಅಭಿವೃದ್ಧಿಪಡಿಸಲು ಕಳೆದ ೩ ವರ್ಷಗಳಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀಡಲಾಗಿರುವ ಅನುದಾನದ ಮೊತ್ತವೆಷ್ಟು ;

(ಈ) ಈ ಅನುದಾನದ ಪೈಕಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ;

(ಉ) ಸದರಿ ಜಿಲ್ಲೆಗಳಿಗೆ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಲು ಪ್ರಸಕ್ತ ಸಾಲಿನಲ್ಲಿ ಅನುದಾನವೇನಾದರು ನಿಗದಿಪಡಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ನಿಗದಿಪಡಿಸಲಾಗಿದೆ ?

## ಭಾಗ್ಯಲಕ್ಷ್ಮಿ ಬಾಂಡ್ ವಿತರಣೆ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೨ (೧೮೪೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇನತರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ವಿತರಿಸಲಾದ ಬಾಂಡ್‍ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ವರ್ಷಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿ ಫಲಾನುಭವಿಗಳಿಗೆ ವಿತರಿಸಬೇಕಾದ ಬಾಂಡ್‍ಗಳ ಸಂಖ್ಯೆ ಎಷ್ಟು; (ವರ್ಷಾವಾರು ಮಾಹಿತಿ ನೀಡುವುದು)

(ಇ) ಬಾಂಡ್‍ಗಳನ್ನು ವಿತರಿಸಬೇಕಾದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಯಾವ ಕಾಲಮಿತಿಯಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮುಕ್ತಾಯಗೊಳಿಸಲಾಗುವುದು ? ( ಸಂಪೂರ್ಣ ಮಾಹಿತಿ ನೀಡುವುದು)

## ಗಡಿ ಪ್ರದೇಶಾಭಿವೃದ್ಧಿಯ ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೩ (೧೬೪೧) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಡಿ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಹಾಗೂ ಖರ್ಚು ಮಾಡಿದ ಅನುದಾನ ಎಷ್ಟು; ಉಳಿಕೆ ಅನುದಾನ ಎಷ್ಟು;

(ಆ) ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಅನುದಾನದಲ್ಲಿ ಗಡಿ ತಾಲ್ಲೂಕುಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)



(ಇ) ಕಳೆದ ೩ ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಎಷ್ಟು; ಮತ್ತು ಯಾವುವು ? (ವರ್ಷವಾರು ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

## ದಿದ್ದಿಗೆ ಗ್ರಾಮಪಂಚಾಯತಿಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೪ (೧೫೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‍ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳಲ್ಲಿ ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ದಿದ್ದಿಗೆ ಗ್ರಾಮಪಂಚಾಯತಿಗೆ ಬಿಡುಗಡೆಯಾದ ಕಾರ್ಯನಿರ್ವಹಣಾ ಅನುದಾನವೆಷ್ಟು; ಯಾವ ಯಾವ ಲೆಕ್ಕ ಶೀರ್ಷಿಕೆಯಲ್ಲಿ ಅನುದಾನ ಬಿಡುಗಡೆಯಾಗಿದೆ; ಸದರಿ ಮೊತ್ತವನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗಿದೆ;

(ಆ) ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ದಿದ್ದಿಗೆ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳೇನು; (ವಿವರ ನೀಡುವುದು)

(ಇ) ಗ್ರಾಮ ಪಂಚಾಯತಿಗಳು ಕಾರ್ಯನಿರ್ವಹಣಾ ಅನುದಾನಕ್ಕೆ ಅರ್ಹವಾಗಲು ಇರುವ ಮಾನದಂಡಗಳಾವುವು?

## ಹುಚ್ಚಂಗಿಪುರ ಗ್ರಾಮದ ಅಭಿವೃದ್ಧಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೫ (೧೫೮೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗೆ ಯಾವ ಯಾವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ;

(ಆ) ಕಳೆದ ಐದು ವರ್ಷಗಳಲ್ಲಿ ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಯಾವುವು; (ವಿವರ ನೀಡುವುದು)

(ಇ) ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು ಈ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಕೈಗೊಂಡ ಕ್ರಮಗಳೇನು ?

## ಶಾಸಕರ ಮತ್ತು ಸಂಸದರ ಆದರ್ಶ ಗ್ರಾಮ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೬ (೧೫೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಗ್ರಾಮಗಳನ್ನು ಶಾಸಕರ ಮತ್ತು ಸಂಸದರ ಆದರ್ಶ ಗ್ರಾಮ ಯೋಜನೆಯಡಿಯಲ್ಲಿ ಪರಿಗಣಿಸಲಾಗಿದೆ; ಅವು ಯಾವುವು ;



(ಆ) ಆದರ್ಶ ಗ್ರಾಮ ಯೋಜನೆಯಡಿಯಲ್ಲಿ ಸಂಬಂಧಿತ ಗ್ರಾಮದಲ್ಲಿರಬೇಕಾದ ಕನಿಷ್ಠ ಮೂಲ ಸೌಕರ್ಯಗಳಾವುವು; ಈ ಸೌಲಭ್ಯಗಳನ್ನು ಎಲ್ಲಾ ಆದರ್ಶ ಗ್ರಾಮಗಳಲ್ಲಿ ಒದಗಿಸಲಾಗಿದೆಯೇ ;

(ಇ) ಆದರ್ಶ ಗ್ರಾಮ ಯೋಜನೆಗೆ ಕೇಂದ್ರ ಸರ್ಕಾರದಿಂದ ಎಷ್ಟು ಸಹಾಯಧನ ಬಂದಿದೆ; ಇದರಲ್ಲಿ ರಾಜ್ಯ ಸರ್ಕಾರದ ಪಾಲು ಎಷ್ಟು ;

(ಈ) ಕಳೆದ ಎರಡು ವರ್ಷಗಳಲ್ಲಿ ಆದರ್ಶ ಗ್ರಾಮ ಯೋಜನೆಗೆ ಕಂಪನಿಗಳಿಂದ ಪಡೆದ ಸಿ ಎಸ್ ಆರ್ ಫಂಡ್‌ನ ಮೊತ್ತ ಎಷ್ಟು ?

## ಸಂಸ್ಕೃತಿ ನೀತಿಯನ್ನು ರಚಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೭ (೧೫೮೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಾಂಸ್ಕೃತಿಕ ನೀತಿಯನ್ನು ರಚಿಸಲಾಗಿದೆಯೇ; ಪ್ರಶಸ್ತಿಗಳನ್ನು ನೀಡಲು ಮತ್ತು ಅಕಾಡೆಮಿಗಳನ್ನು ಸ್ಥಾಪಿಸಲು ಇರುವ ಮಾರ್ಗದರ್ಶಿ ಸೂತ್ರಗಳೇನು; (ವಿವರ ನೀಡುವುದು)

(ಆ) ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಉತ್ತೇಜನ ಮತ್ತು ಪ್ರಚಾರಕ್ಕಾಗಿ ಒದಗಿಸಲಾದ ಅನುದಾನ ವೆಚ್ಚವಾಗಿದ್ದರೂ ಯೋಜನೆಯ ಅನುಷ್ಠಾನದಲ್ಲಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಯೋಜನೆಯ ಅನುಷ್ಠಾನವನ್ನು ಸಮರ್ಪಕಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯೋಜನೆಗಳನ್ನು ಜಾರಿ ಮಾಡುವ ಅಧಿಕಾರಿಗಳ ಇಚ್ಛಾಶಕ್ತಿಯ ಕೊರತೆಯಿಂದ ಯೋಜನೆಗಳು ವಿಫಲವಾಗಿರುವ ಬಗ್ಗೆ ಸರ್ಕಾರದ ನಿಲುವೇನು ?

## ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಅನುದಾನ ನೀಡುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦೮ (೧೫೮೭) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳಿಗಾಗಿ ಸಂಘ ಸಂಸ್ಥೆಗಳಿಗೆ ಬಿಡುಗಡೆಗೊಳಿಸಿದ ಅನುದಾನದ ಮೊತ್ತವೆಷ್ಟು; (ಸಂಘ ಸಂಸ್ಥೆಗಳ ಹೆಸರಿನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಾಂಸ್ಕೃತಿಕ ಸಂಘ ಸಂಸ್ಥೆಗಳಿಗೆ ಅನುದಾನ ನೀಡಲು ಇರುವ ನಿಯಮಗಳೇನು; ಒಂದು ವರ್ಷದಲ್ಲಿ ಒಂದು ಸಂಸ್ಥೆಗೆ ಗರಿಷ್ಠ ಎಷ್ಟು ಮೊತ್ತವನ್ನು ಅನುದಾನವೆಂದು ನೀಡಬಹುದು; ಒಂದು ವರ್ಷದಲ್ಲಿ ಒಂದು ಸಂಸ್ಥೆಗೆ ಎಷ್ಟು ಕಾರ್ಯಕ್ರಮಗಳಿಗೆ ಅನುದಾನ ನೀಡಬಹುದು ? (ವಿವರ ನೀಡುವುದು)



## ನಂಜನಗೂಡು ತಾಲ್ಲೂಕಿನ ಮಹದೇಶ್ವರ ಬೆಟ್ಟವನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಗೊಳಿಸುವ ಬಗ್ಗೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೪೯ (೧೬೧೬) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಂಜನಗೂಡು ತಾಲ್ಲೂಕಿನಲ್ಲಿರುವ ಮಹದೇಶ್ವರ ಬೆಟ್ಟವನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

(ಆ) ಕ್ಷೇತ್ರದ ಅಭಿವೃದ್ಧಿಗೆ ಮತ್ತು ಬೆಟ್ಟದ ಮೇಲೆ ಹೋಗುವ ರಸ್ತೆಯ ಅಭಿವೃದ್ಧಿಗೆ ಸೂಕ್ತ ಅನುದಾನ ಬಿಡುಗಡೆ ಮಾಡಿ ಇದನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲಾಗುವುದೇ ?

## ಹನೂರು ತಾಲ್ಲೂಕಿನ ಗ್ರಾಮೀಣ ರಸ್ತೆಗಳ ಅಭಿವೃದ್ಧಿ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧೦ (೧೬೧೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆ, ಮಲೆಮಹದೇಶ್ವರ ಬೆಟ್ಟ ಗ್ರಾಮಪಂಚಾಯಿತಿ ವ್ಯಾಪ್ತಿಯ ಪಡಸಲನತ್ತ, ಇಂಡಿಗನತ್ತ, ತೊಳಸಿಕೆರೆ, ನಾಗಮಲೆ, ದೊಡ್ಡಾಣೆ, ತೋಕೆರೆ, ಕೊಕ್ಕಬಕ್ಕರೆ, ಹಳೆಯೂರು ರಸ್ತೆಗಳು ಈಚೆಗೆ

ಬಿದ್ದ ಮಳೆಯಿಂದ ಪೂರ್ತಿ ಹಾಳಾಗಿ ಸಂಚಾರಕ್ಕೆ ಯೋಗ್ಯವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೂಡಲೇ ಈ ರಸ್ತೆಗಳನ್ನು ದುರಸ್ಥಿಗೊಳಿಸಿ, ಗಿಡಗಂಟೆಗಳನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ ;

(ಆ) ಹನೂರು ತಾಲ್ಲೂಕು, ಎಲ್ಲೆಮಾಳ ಗ್ರಾಮಪಂಚಾಯಿತಿ ವ್ಯಾಪ್ತಿಯ ಬಿ.ಎಂ.ಹಳ್ಳಿ (ಗೂಳ್ಯ) ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿರುವ ಹಳ್ಳಕ್ಕೆ ಸೇತುವೆ ನಿರ್ಮಿಸಿ ಎಲ್ಲೆಮಾಳ–ಗೂಳ್ಯ ರಸ್ತೆಯನ್ನು ಅಭಿವೃದ್ಧಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0266/400 ಪ್ರತಿಗಳು/12–03–2020